ಲಿಖಿತ ಮೂಲಕ
ಉತ್ತರಿಸುವ ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೬

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತೆರಡನೆಯ ಅಧಿವೇಶನ**

**ಬುಧವಾರ, ದಿನಾಂಕ : ೦೯ನೇ ಡಿಸೆಂಬರ್, ೨೦೨೦**

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೫. ಕೃಷಿ ಸಚಿವರು.

---

## ಫಸಲ್ ಭೀಮಾ ಯೋಜನೆ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೦ (೨೬೬) ಮಾನ್ಯ ಕೃಷಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ದೇಶದಲ್ಲಿಯೇ ಪ್ರಥಮವಾಗಿದ್ದು, ಈ ಯೋಜನೆಯಡಿಯಲ್ಲಿ ಕಾನೂನನ್ನು ಸರಳೀಕರಣಗೊಳಿಸಿ ಪ್ರತಿ ರೈತರಿಗೆ ವಿಮೆ ತಲುಪುವಂತೆ ಮಾಡುವ ಯೋಜನೆಯೇನಾದರೂ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೧ (೨೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬ ರಿಂದ ೨೦೧೯ವರೆಗಿನ ಅವಧಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಜರುಗಿದ ಎಸ್.ಸಿ.ಪಿ/ಟಿ.ಎಸ್.ಪಿ ಕಾಮಗಾರಿಗಳು ನಿಯಮಾನುಸಾರ ನಡೆದಿವೆಯೇ ; ನಡೆದಿದ್ದಲ್ಲಿ, ಆ ಕಾಮಗಾರಿಗಳ (ಔರಾದ, ಬೀದರ್, ಭಾಲ್ಕಿ) ಪ್ರತ್ಯೇಕ ವಿವರ ನೀಡುವುದು;

(ಆ) ನಿಯಮಾನುಸಾರ ಜರುಗದ ಕಾಮಗಾರಿಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಂತಹ ಕಾಮಗಾರಿಗಳನ್ನು ಮಾಡಿದಂತಹ ಅಧಿಕಾರಿಗಳ ವಿರುದ್ಧ ಎಸ್.ಸಿ.ಪಿ/ಟಿ.ಎಸ್.ಪಿ ಕಾಯ್ದೆ ೨೦೧೩ರ ಅನ್ವಯ ಪ್ರಕರಣ ದಾಖಲು ಮಾಡಲಾಗಿದೆಯೇ ; ಪ್ರಕರಣ ದಾಖಲಿಸದಿರಲು ಕಾರಣವೇನು ? (ವಿವರ ನೀಡುವುದು)

## ಇನಾಮಿ ಜಮೀನನ್ನು ಕೃಷಿಯೇತರ (ಎನ್.ಎ) ಜಮೀನಾಗಿ ಮಾಡಿರುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೨ (೨೬೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಅಧಿವೇಶನದಲ್ಲಿ ಭರವಸೆ ನೀಡಿದಂತೆ ಎಸ್.ಸಿ./ ಎಸ್.ಟಿ.ಗಳಿಗೆ ನೀಡಲಾದ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ಮಾರಾಟ ಮಾಡಲು ಅವಕಾಶವಿದೆಯೇ; ಇಲ್ಲದಿದ್ದಲ್ಲಿ, ಈ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ನಿವೇಶನಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಈ ಜಮೀನಿನ ವಿಸ್ತೀರ್ಣವೇನು ;

(ಆ) ಬೀದರ್ ನಗರದ ಕುಂಬಾರವಾಡ ಸರ್ವೆ ಸಂಖ್ಯೆ: ೩೫ರ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಪರಿವರ್ತಿಸಿ ನಿವೇಶನಗಳ ಮಾರಾಟ ಮಾಡುತ್ತಿರುವ ಬಗ್ಗೆ ಹಿಂದಿನ ಅಧಿವೇಶನದಲ್ಲಿ ತನಿಖೆ ನಡೆಸುವುದಾಗಿ ಈ ಹಿಂದೆ ಸದನದಲ್ಲಿ ಆಶ್ವಾಸನೆ ನೀಡಿದ್ದರೂ ಇಲ್ಲಿಯವರೆಗೆ ತನಿಖೆ ನಡೆಸದಿರಲು ಕಾರಣಗಳೇನು ;

(ಇ) ಬೀದರ್ ಜಿಲ್ಲೆಯಲ್ಲಿ ನೆರೆ ಹಾವಳಿಗೆ ತುತ್ತಾದ ಜಮೀನು ಎಷ್ಟು; ಸಂತ್ರಸ್ಥರಿಗೆ ಪರಿಹಾರ ನೀಡಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ?

## ಶಾಸಕರಿಗೆ, ಸಂಸದರಿಗೆ ಒದಗಿಸಿದ ಅನುದಾನದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೧೬೩ (೩೯೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಕಳೆದ ೦೩ ವರ್ಷಗಳಿಂದ ಯಾವ ಯಾವ ಶಾಸಕರ ಹಾಗೂ ಸಂಸದರ ಶಿಫಾರಸ್ಸಿನ ಮೇಲೆ ಎಷ್ಟು ಮೊತ್ತದ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಸಿ.ಸಿ ರಸ್ತೆಗೆ ಅನುದಾನ ಒದಗಿಸಲಾಗಿದೆ ? (ಸಂಪೂರ್ಣವಾದ ವಿವರವನ್ನು ನೀಡುವುದು)

## ರಾಜ್ಯ ಹೆದ್ದಾರಿಯ ರಸ್ತೆ ಕಾಮಗಾರಿ ಪೂರ್ಣಗೊಳಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೪ (೩೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಲೆಕ್ಕ ಶೀರ್ಷಿಕೆ:೫೦೫೪-೦೪-೩೩೭-೦-೦೧-೧೫೪ರಡಿ ನಾಗಮಂಗಲ ತಾಲ್ಲೂಕಿನ ಕಾಂತಾಪುರ ಮಾರ್ಗ ರಾಜ್ಯ ಹೆದ್ದಾರಿ ೧೯ (ಎನ್.ಹೆಚ್-೧೫೦ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆ ಮತ್ತು ನಾಗಮಂಗಲ ತಾಲ್ಲೂಕು ದೇವಲಾಪುರ ಮಾರ್ಕೋನಹಳ್ಳಿ ಸೇರುವ ಜಿಲ್ಲಾ

ಮುಖ್ಯ ರಸ್ತೆಯ ರಾಜ್ಯ ಹೆದ್ದಾರಿ ರಸ್ತೆಯ ಅಭಿವೃದ್ಧಿಪಡಿಸುವ ಕಾಮಗಾರಿಯನ್ನು ರೂ.೭೫೦.೦೦ ಲಕ್ಷಗಳಿಗೆ ಮಂಜೂರಾಗಿ ಪ್ರಸ್ತುತ ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದರೂ ಇನ್ನೂ ಕಾಮಗಾರಿ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಗುಣಮಟ್ಟ ಪರಿಶೀಲಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಕಾಮಗಾರಿ ವಿಳಂಬದಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತುರ್ತಾಗಿ ಕಾಮಗಾರಿಯನ್ನು ಗುಣಮಟ್ಟದಿಂದ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ಸಂಬಂಧಪಟ್ಟ ಗುತ್ತಿಗೆದಾರರು, ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಕೈಗೊಳ್ಳಲಾದ ಶಿಸ್ತು ಕ್ರಮಗಳೇನು ? (ವಿವರ ನೀಡುವುದು)

## ಸೇತುವೆ ನಿರ್ಮಾಣದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೬೫ (೨೯೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕು, ಮದ್ದೂರು–ಕೊಪ್ಪ ಮುಖ್ಯ ರಸ್ತೆಯಿಂದ ಡಿ, ಹೊಸಹಳ್ಳಿ ಮಾರ್ಗವಾಗಿ ಬಿದರಕೋಟೆ ಸೇರುವ ರಸ್ತೆಗೆ ಲೆಕ್ಕ ಶೀರ್ಷಿಕೆ ೫೦೫೪ ಅಡಿಯಲ್ಲಿ ಡಾಂಬರೀಕರಣ/ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ರಸ್ತೆಗೆ ಡಾಂಬರೀಕರಣ/ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಡಿ. ಹೊಸಹಳ್ಳಿಯಲ್ಲಿ ಎರಡು ಸೇತುವೆಗಳನ್ನು ನಿರ್ಮಿಸದಿರುವುದರಿಂದ ಅಪಘಾತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸೇತುವೆಗಳನ್ನು ಯಾವಾಗ ನಿರ್ಮಿಸಲಾಗುವುದು ;

(ಇ) ಸದರಿ ರಸ್ತೆಗೆ ಡಾಂಬರೀಕರಣ/ರಸ್ತೆ ಅಭಿವೃದ್ಧಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಗ್ರಾಮದ ಪರಿಮಿತಿಯಲ್ಲಿ ರಸ್ತೆಯ ಇಕ್ಕೆಲಗಳಲ್ಲಿ ಚರಂಡಿಯನ್ನು ನಿರ್ಮಿಸದಿರುವುದರಿಂದ ಕೊಳಚೆ ನೀರು ರಸ್ತೆಗೆ ಬಂದು ರಸ್ತೆಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವಾಗ ಚರಂಡಿಗಳನ್ನು ನಿರ್ಮಿಸಲಾಗುವುದು ? (ಮಾಹಿತಿ ನೀಡುವುದು)

## ಫಲಾನುಭವಿಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೬ (೨೯೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಗೆ ಕಳೆದ ಐದು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಆ) ಜಿಲ್ಲೆಗೆ ಮಂಜೂರು ಮಾಡಲಾದ ಮನೆಗಳನ್ನು ಸಂಖ್ಯೆಗೆ ಎದುರಾಗಿ ಗ್ರಾಮ ಪಂಚಾಯಿತಿಗಳು ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಿರುತ್ತವೆ ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಇ) ಆಯ್ಕೆ ಮಾಡಲಾದ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಈ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮದ್ದೂರು ತಾಲ್ಲೂಕಿನ ಗ್ರಾಮ ಪಂಚಾಯಿತಿಗಳ ಅನುದಾನ ಬಿಡುಗಡೆ ಸಂಬಂಧ ನಿಗಮದಿಂದ Vijil App ನಲ್ಲಿ ಆಯ್ಕೆ ಮಾಡಲಾಗಿರುವ ಫಲಾನುಭವಿಗಳ ಸಂಖ್ಯೆಗೆ ಎದುರಾಗಿ, ಗ್ರಾಮ ಪಂಚಾಯಿತಿಯು ಜಿಪಿಎಸ್ ಮಾಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರಗಳನ್ನು ಫಲಾನುಭವಿವಾರು/ ಪಂಚಾಯಿತಿವಾರು ಒದಗಿಸುವುದು)

(ಉ) ನಿಗಮವು ಫಲಾನುಭವಿಗಳನ್ನು Vijil App ನಲ್ಲಿ ಆಯ್ಕೆ ಮಾಡಿದ್ದರೂ ಸಹ ಗ್ರಾಮ ಪಂಚಾಯಿತಿಯು ನಿಗಧಿತ ಸಮಯದೊಳಗೆ ಜಿಪಿಎಸ್ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಜಿಪಿಎಸ್ ಮಾಡದಿರಲು ಕಾರಣವೇನು ; ಇದರಿಂದಾಗಿ ಫಲಾನುಭವಿಗಳಿಗೆ ತೊಂದರೆಯಾಗುವುದಿಲ್ಲವೆ ; ನಿಗಧಿತ ಸಮಯದೊಳಗೆ ಜಿಪಿಎಸ್ ಮಾಡದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು ? (ವಿವರ ಒದಗಿಸುವುದು)

## ಸರ್ಕಾರದ ಆದೇಶಗಳನ್ನು ಉಲ್ಲಂಘಿಸಿ ನೇಮಕಾತಿ ಮಾಡಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೭ (೨೯೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಕೃಷಿ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ನೇರ ನೇಮಕಾತಿಯಲ್ಲಿ ಸರ್ಕಾರ ಆದೇಶಗಳನ್ನು ಉಲ್ಲಂಘಿಸಿ ನೇಮಕಾತಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದಿ:೦೩.೦೩.೨೦೧೮ರಲ್ಲಿ ಸರ್ಕಾರ ಶ್ರೀ ಮನೀಶ್ ಮೌದಿಲ್ ರವರ ಅಧ್ಯಕ್ಷತೆಯಲ್ಲಿ ರಚಿಸಿದ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ; ಪ್ರಸ್ತುತ ಅದು ಯಾವ ಹಂತದಲ್ಲಿದೆ ;

(ಇ) ನೇಮಕಾತಿಯಲ್ಲಿ ಅಕ್ರಮವೆಸಗಿರುವವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಅಕ್ರಮವೆಸಗಿದ್ದರೆ ನೇಮಕಾತಿ ಆದೇಶ ರದ್ದು ಮಾಡಿ ಹೊಸದಾಗಿ ನೇಮಕಾತಿ ಮಾಡಿಕೊಳ್ಳುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ?

## ರಸ್ತೆ ಮತ್ತು ಸಿಡಿ ಹಾನಿಯಾಗಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೬೮ (೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಕಳೆದ ಆಗಸ್ಟ್–೨೦೨೦ ರಿಂದ ಸುರಿದ ಭಾರಿ ಮಳೆಗೆ ರಸ್ತೆ ಮತ್ತು ಸಿಡಿಗಳು

ಹಾನಿಯಾಗಿರುವುದು ಎಷ್ಟು ; ಹಾಗಿದ್ದಲ್ಲಿ, ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಬಂದಿದ್ದಲ್ಲಿ, ಎಲ್ಲೆಲ್ಲಿ ದುರಸ್ಥಿ ಕಾರ್ಯಗಳನ್ನು ಕೈಗೊಂಡಿದೆ; ಆ ಪೈಕಿ ಪೂರ್ಣಗೊಂಡ ಹಾಗೂ ಬಾಕಿ ಇರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಕಾಮಗಾರಿಗಳ ವಿಳಂಬಕ್ಕೆ ಕಾರಣವೇನು ; (ವಿವರ ನೀಡುವುದು)

(ಇ) ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಿಗೆ ಸಂಪರ್ಕ ಕಡಿತಗೊಂಡ ಗ್ರಾಮಗಳೆಷ್ಟು ? (ವಿವರ ನೀಡುವುದು)

## ಬೆಲೀಕೇರಿ ಬಂದರು ನಿರ್ವಹಣೆ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೬೯ (೨೭೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆ ಅಂಕೋಲಾದಲ್ಲಿನ ಬೇಲಿಕೇರಿ ಬಂದರು ಪ್ರದೇಶದಲ್ಲಿ ನಿರ್ವಹಣೆ ಕೊರತೆಯಿಂದಾಗಿ ಫ್ಲಾಟ್ ಫಾರ್ಮ್ ಇಲ್ಲದೇ ಮಹಿಳೆಯರು ಮೀನು ಒಣಗಿಸಲಾಗದೆ ಪ್ರತಿನಿತ್ಯ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಬಂದರು ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಲಾಕ್‌ಡೌನ್ ಸಮಯದಲ್ಲಿ ಮೀನುಗಾರರ ರಕ್ಷಣೆ ಮಾಡಬೇಕಾದದ್ದು ಸರ್ಕಾರದ ಕರ್ತವ್ಯವಾಗಿದ್ದು, ಅವರ ಜೀವನ ನಿರ್ವಹಣೆಗೆ ಸರ್ಕಾರದ ಮಟ್ಟದಲ್ಲಿ ಕೈಗೊಂಡ ಕ್ರಮಗಳೇನು ;

(ಈ) ಮೀನುಗಾರರು ಈ ಕ್ಲಿಷ್ಟಕರ ಸನ್ನಿವೇಶವಾದ ಕೋವಿಡ್-೧೯ರ ಸಮಯದಲ್ಲಿ ಉದ್ಯೋಗವಿಲ್ಲದೇ ಕಷ್ಟಪಡುತ್ತಿದ್ದು, ಇವರಿಗೆ ಉದ್ಯೋಗ ಭದ್ರತೆ ನೀಡುವಲ್ಲಿ ಸರ್ಕಾರವು ಕ್ರಮವಹಿಸಿದೆಯೇ; ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ? (ಪೂರ್ಣ ಮಾಹಿತಿ ನೀಡುವುದು)

## ಉಡುಪಿ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯಡಿಯಲ್ಲಿ ಬರುವ ರಸ್ತೆಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೭೦ (೨೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯ ಲೋಕೋಪಯೋಗಿ ಇಲಾಖೆಯ ಅಧೀನದಲ್ಲಿರುವ ರಸ್ತೆಗಳು ಯಾವುವು; ಅವುಗಳ ಉದ್ದವೆಷ್ಟು; (ರಸ್ತೆ ಮತ್ತು ಕಿ.ಮೀ. ವಿವರ ನೀಡುವುದು)

(ಆ) ಈ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಯ ರಸ್ತೆಗಳೆಂದು ಘೋಷಣೆ ಮಾಡಲಾಗಿದ್ದು ಯಾವಾಗ ; (ಘೋಷಣೆಯ ಪ್ರತಿಯನ್ನು ಒದಗಿಸುವುದು)

(ಇ) ಲೋಕೋಪಯೋಗಿ ರಸ್ತೆಗಳ ನಿಗಧಿಪಡಿಸಲಾದ ಗಡಿ ರೇಖೆ, ಕಟ್ಟಡ, ರೇಖೆ ಮತ್ತು ನಿಯಂತ್ರಣ ರೇಖೆಗಳು ಯಾವುವು; (ಆದೇಶದ ಪ್ರತಿ ಒದಗಿಸುವುದು) ಈ ಕಟ್ಟಡ ರೇಖೆಗಳು ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಪರಿಮಿತಿಯಲ್ಲಿ ಹಾಗೂ ಮಹಾನಗರ ಪಾಲಿಕೆಯಿಂದ ೧೫ ಕಿ.ಮೀ. ಪರಿಮಿತಿಯಲ್ಲಿ ವ್ಯತ್ಯಾಸವಿರಲು ಕಾರಣವೇನು ?

## ಉಪ ವಿಭಾಗಾಧಿಕಾರಿ ತಹಶೀಲ್ದಾರ ರವರ ಜವಾಬ್ದಾರಿಗಳ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೭೧ (೨೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಉಪ ವಿಭಾಗಾಧಿಕಾರಿಗಳು ಮತ್ತು ತಹಶೀಲ್ದಾರರ ಕಛೇರಿಗಳ ಸಂಖ್ಯೆ ಎಷ್ಟು; ಸದರಿ ಕಛೇರಿಗಳಿಗೆ ಮಂಜೂರಾತಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಕೊರತೆಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಕೊರತೆಯಿರುವ ಹುದ್ದೆಗಳನ್ನು ಯಾವಾಗ ಭರ್ತಿಮಾಡಲಾಗುವುದು ; (ಜಿಲ್ಲಾವಾರು, ಹುದ್ದೆವಾರು ವಿವರ ನೀಡುವುದು)

(ಆ) ಉಪವಿಭಾಗಾಧಿಕಾರಿ ಮತ್ತು ತಹಶೀಲ್ದಾರರವರಿಗೆ ಅರೆ ನ್ಯಾಯಿಕ ಅಧಿಕಾರವನ್ನು ಪ್ರದತ್ತ ಮಾಡುವ ಕಾಯ್ದೆಗಳು ಯಾವುವು ; (ಕಾಯ್ದೆವಾರು ವಿವರ ನೀಡುವುದು)

(ಇ) ಉಪವಿಭಾಗಾಧಿಕಾರಿ ಮತ್ತು ತಹಶೀಲ್ದಾರರವರು ಅಧ್ಯಕ್ಷರು ಸದಸ್ಯ ಕಾರ್ಯದರ್ಶಿ ಸದಸ್ಯರಾಗಿರುವ ಸಮಿತಿಗಳು ಯಾವುವು; ಇವರು ಯಾವ ಯಾವ ಇಲಾಖೆಗಳ ಯಾವ ಯಾವ ಸಮಿತಿಗಳಿಗೆ ಅಧ್ಯಕ್ಷರಾಗಿರುತ್ತಾರೆ ; ಇವರು ವಾರ್ಷಿಕವಾಗಿ ಕನಿಷ್ಟ ಭಾಗವಹಿಸಬೇಕಾದ ಸಮಿತಿ ಸಭೆಗಳ ಸಂಖ್ಯೆ ಎಷ್ಟು ? (ಅವುಗಳಲ್ಲಿ ಕಾರ್ಯನಿರ್ವಹಿಸಲು ಇರುವ ಮಾರ್ಗಸೂಚಿ ಸುತ್ತೋಲೆಯ ಪ್ರತಿಯನ್ನು ಒದಗಿಸುವುದು)

## ಸೂರು ಒದಗಿಸುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೭೨ (೨೪೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿಯೊಬ್ಬರಿಗೂ "ಸೂರು" ಎಂಬ ಕಾರ್ಯಕ್ರಮವು ಸರ್ಕಾರದ ಮಟ್ಟದಲ್ಲಿ ಜರೂರಾಗಿ ನಡೆಯುತ್ತಿದೆಯೇ ;

(ಆ) ಬಡವರಿಗೆ ಸೂರು ಒದಗಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ಕಾರ್ಯಕ್ರಮಗಳಾವವು; ಈ ಕಾರ್ಯಕ್ರಮಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಇ) ಇದುವರೆವಿಗೂ ರಾಜ್ಯದಲ್ಲಿ ಗುರುತಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಎಷ್ಟು ಫಲಾನುಭವಿಗಳಿಗೆ ವಸತಿ ಹಂಚಿಕೆ ಮಾಡಲಾಗಿದೆ ;

(ಈ) ವಸತಿ ಇಲಾಖೆಯಡಿ ಹಂಚಿಕೆ ಮಾಡುವ ನಿವೇಶನಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ನಿವೇಶನಕ್ಕಾಗಿ ಗುರುತಿಸಿರುವ ಒಟ್ಟು ಜಮೀನು ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ನಮೂನೆ ೫೦,೫೩ ಮತ್ತು ೫೭ರಲ್ಲಿ ಸಲ್ಲಿಕೆಯಾದ ಅರ್ಜಿಯ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೭೩ (೨೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅಕ್ರಮ ಸಕ್ರಮ ಯೋಜನೆಯಲ್ಲಿ ನಮೂನೆ ೫೦,೫೩ ರಲ್ಲಿ ರೈತರಿಂದ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಸಮಿತಿಯಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು; ಹಕ್ಕುಪತ್ರ ಪತ್ರ ನೀಡಿದ ಪ್ರಕರಣಗಳ ಸಂಖ್ಯೆ ಎಷ್ಟು; ಸಮಿತಿಯಲ್ಲಿ ಮಂಜೂರಾತಿ ನೀಡಿ ಹಕ್ಕುಪತ್ರ ನೀಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; ವಿಚಾರಣೆಯ ಹಂತದಲ್ಲಿರುವ

ಮತ್ತು ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ನಮೂನೆವಾರು ಮಾಹಿತಿಯನ್ನು ನೀಡುವುದು)

(ಆ) ರಾಜ್ಯದಲ್ಲಿ ನಮೂನೆ ೫೭ ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು; ಶಾಸನಬದ್ಧವಾಗಿ ೧೬/೦೫/೨೦೧೯ ವರೆಗೂ ಅರ್ಜಿಯನ್ನು ಸಲ್ಲಿಸಲು ಅವಕಾಶ ಇದ್ದರೂ ಮತ್ತು ರೈತರು ಅರ್ಜಿಯನ್ನು ಸಲ್ಲಿಸಲು ಬಂದರೂ ಮತ್ತು ಅಂಚೆ ಮೂಲಕ ಸಲ್ಲಿಸಿದರೂ ಉಡುಪಿ ಜಿಲ್ಲೆಯಲ್ಲಿ ಚುನಾವಣೆ ಕಾರಣ ನೀಡಿ ೮ ದಿನಗಳು ಬಾಕಿಯಿರುವಾಗಲೇ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವಕಾಶವಂಚಿತರಾದ ರೈತರಿಗೆ ಮತ್ತೊಮ್ಮೆ ಅವಕಾಶ ನೀಡಲು ಸರಕಾರ ಕೈಗೊಂಡ ಕ್ರಮವೇನು ;

(ಇ) ಅಕ್ರಮ ಸಕ್ರಮ ಯೋಜನೆಯಲ್ಲಿ ಅರ್ಜಿ ಸಲ್ಲಿಸಿದ ರೈತರು ನೈಜ ಕೃಷಿಯ ಗದ್ದೆ ತೋಟವನ್ನು ಹೊಂದಿದ್ದರೂ ಸಹ ಡೀಮ್ಡ್ ಫಾರೆಸ್ಟ್ ಪಟ್ಟಿಯಲ್ಲಿದೆ ಎನ್ನುವ ಕಾರಣ ನೀಡಿ ಹಕ್ಕುಪತ್ರವನ್ನು ನೀಡದಿರುವುದರಿಂದ ರೈತರು ಮೂರು ದಶಕಗಳಿಂದ ಶೋಷಣೆಗೆ ಒಳಗಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿರುತ್ತದೆಯೇ; ಭೂ ಸ್ವಾಧೀನತೆಯನ್ನು ಹೊಂದಿ ಕೃಷಿಯನ್ನು ಮಾಡುತ್ತಿರುವ ರೈತರಿಗೆ ಸದರಿ ಭೂಮಿಯನ್ನು ಮಂಜೂರಾತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ಕಂದಾಯ ಇಲಾಖೆಯಲ್ಲಿನ ಭ್ರಷ್ಟಾಚಾರ ನಿಗ್ರಹಕ್ಕೆ ಕ್ರಮವಹಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೪ (೩೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಂದಾಯ ಇಲಾಖೆಯಲ್ಲಿ ಅದರಲ್ಲೂ ಮುಖ್ಯವಾಗಿ ಜಿಲ್ಲಾಧಿಕಾರಿಗಳು ಅಸಿಸ್ಟೆಂಟ್ ಕಮೀಷನರ್, ತಹಶೀಲ್ದಾರ್‌ಗಳ ಹಾಗೂ ಸಬ್ ರಿಜಿಸ್ಟಾರ್ ರವರುಗಳ ಕಛೇರಿಗಳಲ್ಲಿ ನಡೆಯುವ ಭ್ರಷ್ಟಾಚಾರಗಳನ್ನು ತಡೆಯಲು ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರದಲ್ಲಿರುವ ವ್ಯವಸ್ಥೆ ಏನು ;

(ಆ) ದೂರು ಬಂದಾಗ ಮಾತ್ರ ಲೋಕಾಯುಕ್ತ, ಎ.ಸಿ.ಬಿ. ಅಧಿಕಾರಿಗಳು ದಾಳಿ ಮಾಡುತ್ತಿದ್ದು, ಸದರಿ ಕಛೇರಿಗಳಲ್ಲಿ ದಿನನಿತ್ಯ ಭ್ರಷ್ಟಾಚಾರದಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಸರ್ಕಾರ ಈ ಬಗ್ಗೆ ಗಮನ ಹರಿಸಿ ಧಿಡೀರ್ ತಪಾಸಣೆ ನಡೆಸಿ ಕ್ರಮ ಕೈಗೊಳ್ಳಲು ವಿಶೇಷ ಕಾರ್ಯಕ್ರಮ ಏನಾದರೂ ರೂಪಿಸುತ್ತದೆಯೇ ;

(ಇ) ಲೋಕಾಯುಕ್ತ ಅಥವಾ ಎ.ಸಿ.ಬಿ ದಾಳಿ ನಡೆಸಿ ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮಕೈಗೊಳ್ಳಬೇಕೆಂದು ವರದಿ ಕೊಟ್ಟರು ಅನುಮತಿ ನೀಡಲು ವಿಳಂಬ ನೀತಿ ಅನುಸರಿಸುತ್ತಿರುವುದೇಕೆ ;

(ಈ) ದಾಳಿಗೊಳಗಾಗಿ ಅಮಾನತ್ತಿನಲ್ಲಿರುವ ಅಧಿಕಾರಿಗಳನ್ನು ಅವರು ದೋಷಮುಕ್ತರಾಗುವ ಮುನ್ನವೇ ಮತ್ತೇ ಸರ್ಕಾರಿ ಸೇವೆಗೆ ನೇಮಿಸುತ್ತಿರುವುದು ಸರಿಯಾದ ಕ್ರಮವೇ; ಇದನ್ನು ತಪ್ಪಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದೇ ?

## ದೇವಸ್ಥಾನಗಳಿಗೆ ಅನುದಾನ ಮಂಜೂರು ಮಾಡುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೫ (೩೧೬) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ದೇವಸ್ಥಾನ ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಅನುದಾನವನ್ನು ಮಂಜೂರು ಮಾಡಲಾಗಿದೆ ; ಇನ್ನೂ ಅನುದಾನ ಬಾಕಿ ಇರುವ ಸಂಸ್ಥೆಗಳೆಷ್ಟು ; (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು)

(ಆ) ಹಲವಾರು ವರ್ಷಗಳಿಂದ ಅನೇಕ ದೇವಸ್ಥಾನಗಳ ಸಮಿತಿಯವರು ಅನುದಾನಕ್ಕೆ ಬೇಡಿಕೆ ಇಟ್ಟಿದ್ದರೂ ಹಣಕಾಸಿನ ಕೊರತೆಯಿಂದ ನೀಡದಿರುವುದು ನಿಜವೇ ; ಹೆಚ್ಚಿನ ಅನುದಾನವನ್ನು ಆರ್ಥಿಕ ಇಲಾಖೆಯಿಂದ ಪಡೆದು ಹೆಚ್ಚು ಧಾರ್ಮಿಕ ಸಂಸ್ಥೆ ಮತ್ತು ದೇವಾಲಯಗಳಿಗೆ ಅನುದಾನ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ;

(ಇ) ಅನುದಾನ ನೀಡುವಾಗ ಶಾಸಕರು ಮತ್ತಿತರ ಜನಪ್ರತಿನಿಧಿಗಳು ಮಾಡುವ ಶಿಫಾರಸ್ಸುಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದೇ ; ಈ ಬಗ್ಗೆ ಸರ್ಕಾರ ಅನುಸರಿಸುವ ಕ್ರಮಗಳೇನು ?

## ರಸ್ತೆಗಳ ದುರಸ್ಥಿ ಕುರಿತು

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬ (ಇ೧೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ ಜಿಲ್ಲೆಯಲ್ಲಿರುವ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಒಳಪಡುವ ರಸ್ತೆಗಳು ಯಾವುವು ; (ರಾಜ್ಯ ಮತ್ತು ಜಿಲ್ಲಾ ಹೆದ್ದಾರಿಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಲೋಕೋಪಯೋಗಿ ಇಲಾಖೆಯ ರಸ್ತೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದಲ್ಲಿ, ಕಳೆದ ೩ ವರ್ಷಗಳಲ್ಲಿ ಈ ರಸ್ತೆಗಳ ದುರಸ್ಥಿ ಕಾಮಗಾರಿಗಾಗಿ ನಿಗಧಿಪಡಿಸಿ ಬಿಡುಗಡೆ ಮಾಡಿ ವೆಚ್ಚವಾಗಿರುವ ಮೊತ್ತವೆಷ್ಟು ; (ವರ್ಷವಾರು ಕಾಮಗಾರಿಗಳ ಮಾಹಿತಿ ನೀಡುವುದು)

(ಈ) ಸರ್ಕಾರ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಯಾವ ಕಾಲ ಮಿತಿಯೊಳಗಾಗಿ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ವಸತಿ ಇಲಾಖೆಯಿಂದ ಹಂಚಿಕೆಯಾಗಿರುವ ಮನೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೭ (೧೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಸತಿ ಇಲಾಖೆಯ ವಿವಿಧ ಯೋಜನೆಗಳಡಿ ಹಂಚಿಕೆ ಮಾಡುವ ಮನೆಗಳನ್ನು ಪಡೆಯಲು ನಿಗಧಿಪಡಿಸಿರುವ ಮಾನದಂಡಗಳೇನು; ಈ ಯೋಜನೆಗಳಡಿ ಹಾಸನ ಜಿಲ್ಲೆಗೆ ಕಳೆದ ೩ ವರ್ಷಗಳಲ್ಲಿ ಹಂಚಿಕೆಯಾದ ಮನೆಗಳೆಷ್ಟು ; ಈ ಮನೆಗಳನ್ನು ಪಡೆದಿರುವ ಫಲಾನುಭವಿಗಳ ವಿವರ ನೀಡುವುದು ; (ತಾಲ್ಲೂಕು ಮತ್ತು ಹೋಬಳಿ, ಗ್ರಾಮ, ಫಲಾನುಭವಿಗಳ ಹೆಸರು ಜಾತಿವಾರು)

(ಆ) ಹಂಚಿಕೆಯಾಗಿರುವ ಮನೆಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು; ಖರ್ಚಾಗಿರುವ ಅನುದಾನವೆಷ್ಟು; ಮಂಜೂರಾಗದೇ ಬಾಕಿ ಉಳಿದಿರುವ

ಅನುದಾನವೆಷ್ಟು ; ಫಲಾನುಭವಿವಾರು ವಿವರ ನೀಡುವುದು; (ತಾಲ್ಲೂಕು, ಹೋಬಳಿ, ಗ್ರಾಮ, ಫಲಾನುಭವಿ ಹೆಸರು ಮತ್ತು ಜಾತಿ)

(ಇ) ಹಾಸನ ಜಿಲ್ಲೆಯಲ್ಲಿರುವ ನಿರ್ವಸತಿಕರ ಸಂಖ್ಯೆ ಎಷ್ಟು; ಈ ನಿರ್ವಸತಿಕರಿಗೆ ಯಾವ ಕಾಲಮಿತಿಯೊಳಗೆ ವಸತಿ ಕಲ್ಪಿಸಲಾಗುವುದು ? (ತಾಲ್ಲೂಕು, ಹೋಬಳಿ, ಗ್ರಾಮ, ನಿರ್ವಸತಿಕರ ಹೆಸರು ಮತ್ತು ಜಾತಿ ಮಾಹಿತಿಯೊಂದಿಗೆ ವಿವರ ನೀಡುವುದು)

## ಭೂ ಪರಿವರ್ತನೆ ಕೋರಿ ಬಂದಿರುವ ಅರ್ಜಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೮ (೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಭೂ ಪರಿವರ್ತನೆಗಾಗಿ ಎಷ್ಟು ಅರ್ಜಿಗಳು ಸ್ವೀಕೃತವಾಗಿದೆ; ಯಾವ ಯಾವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ ; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು; (ಪ್ರಕರಣವಾರು ವಿವರ ಒದಗಿಸುವುದು)

(ಆ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು ; (ವಿವರವನ್ನು ಪ್ರಕರಣವಾರು ಒದಗಿಸುವುದು)

(ಇ) ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು)

(ಈ) ಕರ್ನಾಟಕ ಭೂಕಂದಾಯ ಅದಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ; (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು)

(ಉ) ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು ? (ವಿವರ ನೀಡುವುದು)

## ಜಲಾನಯನ ಅಭಿವೃದ್ಧಿ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೭೯ (೨೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕೃಷಿ ಇಲಾಖೆಯಲ್ಲಿ ಬರುವ ಜಲಾನಯನ ಅಭಿವೃದ್ಧಿ ಇಲಾಖೆಯು ಜಾರಿಗೊಳಿಸುತ್ತಿರುವ ಯೋಜನೆಗಳು ಯಾವುವು; ಈ ಯೋಜನೆಗಳಡಿ ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಗೆ ನಿಗಧಿಪಡಿಸಿದ ಅನುದಾನವೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಈ ಯೋಜನೆಗಳಡಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಅನುದಾನದಲ್ಲಿ ಕೇಂದ್ರ ಹಾಗೂ ರಾಜ್ಯದ ಪಾಲು ಎಷ್ಟು; ಇದರಲ್ಲಿ ಕೇಂದ್ರ ಹಾಗೂ ರಾಜ್ಯದ ಪ್ರಮಾಣದಲ್ಲಿ ವ್ಯತ್ಯಾಸವೆಷ್ಟು; ಕೇಂದ್ರ ಸರ್ಕಾರದ ಪಾಲಿನ ಪ್ರಮಾಣ ಕಡಿಮೆಯಾಗಿದ್ದಲ್ಲಿ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಅನುದಾನವನ್ನು ಯಾವ ರೀತಿ ಸರಿದೂಗಿಸಲಾಗಿದೆ ; ಇದರಿಂದ ರಾಜ್ಯ ಸರ್ಕಾರಕ್ಕೆ ಆದ ನಷ್ಟವೆಷ್ಟು ? (ಮಾಹಿತಿ ನೀಡುವುದು)

## ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೦ (೨೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು ; (ತಾಲ್ಲೂಕುವಾರು ಮತ್ತು ದೇವಸ್ಥಾನವಾರು ವಿವರ ನೀಡುವುದು)

(ಆ) ಈ ದೇವಾಲಯಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳೆಷ್ಟು ; ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿರುವ ಮುಜರಾಯಿ ದೇವಾಲಯಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು; ಈ ದೇವಸ್ಥಾನಗಳ ಉಸ್ತುವಾರಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಖರ್ಚಾಗಿರುವ ಮೊತ್ತವೆಷ್ಟು ? (ಪ್ರತಿ ದೇವಸ್ಥಾನದ ವಿವರ ನೀಡುವುದು)

## ಫಸಲ್ ಭೀಮಾ ಯೋಜನೆ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೧ (೩೧೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಫಸಲ್ ಭೀಮಾ ಯೋಜನೆಯು ನಿರೀಕ್ಷಿತ ಮಟ್ಟದಲ್ಲಿ ಯಶಸ್ವಿ ಕಾಣದಿರುವುದು ಸರ್ಕಾರದ ಗಮನದಲ್ಲಿದೆಯೇ ; (ವಿವರ ಒದಗಿಸುವುದು)

(ಆ) ಫಸಲ್ ಭೀಮಾ ಯೋಜನೆಯಲ್ಲಿ ರೈತರಿಗಿಂತ ವಿಮಾ ಕಂಪನಿಗಳೇ ಹೆಚ್ಚು ಲಾಭ ಮಾಡಿಕೊಂಡಿದ್ದು, ಯೋಜನೆಯ ಕ್ಲೇಮ್ ನೀಡಲು ಕಠಿಣ ಷರತ್ತುಗಳು, ತಾಂತ್ರಿಕ, ಸಮಸ್ಯೆ, ಜಾಗೃತಿಯ ಕೊರತೆ ಮತ್ತು ಅಡ್ಡಿ ಆತಂಕಗಳ ಕಾರಣಗಳಿಂದ ಸದರಿ ಯೋಜನೆಯು ದುರ್ಬಲವಾಗಿದ್ದು, ನಿರೀಕ್ಷಿತ ಯಶಸ್ಸಿನ ಮಟ್ಟವನ್ನು ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸದರಿ ಯೋಜನೆಯನ್ನು ಯಶಸ್ವಿಗೊಳಿಸಲು/ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಈ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಪಿಂಚಣಿ (ಸಂಧ್ಯಾ ಸುರಕ್ಷಾ, ವಿಧವಾ ವೇತನ ಇತ್ಯಾದಿ) ನಿರ್ವಹಣೆ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೨ (೩೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಾಶಾಸನ (ಪಿಂಚಣಿ) ಯೋಜನೆಯಡಿಯಲ್ಲಿ ಸಂಧ್ಯಾ ಸುರಕ್ಷಾ, ವಿಧವಾ ವೇತನ ಇತ್ಯಾದಿ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಕಳೆದ ಕೆಲವು ತಿಂಗಳಿನಿಂದ ಸರ್ಕಾರ ನೀಡುತ್ತಿರುವ ಪಿಂಚಣಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಬಡವರಿಗೆ, ಹಿರಿಯ ನಾಗರೀಕರಿಗೆ ತುಂಬಾ ತೊಂದರೆಯಾಗಿದ್ದು, ಈ ಕುರಿತಂತೆ ಸರ್ಕಾರದ ನಿಲುವುಗಳೇನು ?

## ನೆರೆ ಪ್ರವಾಹ ಮತ್ತು ಭೂ ಕುಸಿತದ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೩ (೩೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರತಿ ವರ್ಷ ಎದುರಾಗುವ ನೆರೆ ಪ್ರವಾಹ, ಭೂ ಕುಸಿತ ತಪ್ಪಿಸಲು ಸರ್ಕಾರ ಏನಾದರೂ ಯೋಜನೆ ರೂಪಿಸಿದೆಯೇ ;

(ಆ) ರೂಪಿಸಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಭೂ ಸ್ವಾಧೀನ ಮಾಡಲಾದ ಭೂಮಿಗಳ ವಿವರ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೮೪ (೩೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿವಿಧ ಉದ್ದೇಶಗಳಿಗಾಗಿ ಭೂ ಸ್ವಾಧೀನ ಮಾಡಲಾದ ಭೂಮಿಗಳ ವಿವರಗಳನ್ನು ಪಹಣಿಯಲ್ಲಿ ದಾಖಲಿಸಲಾಗಿದೆಯೇ ;

(ಆ) ಪಹಣಿಯನ್ನು ದಾಖಲಿಸಲು ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಎಷ್ಟು ದಿನಗಳೊಳಗೆ ದಾಖಲಿಸಲಾಗುವುದು ?

## ಕೃಷಿ ಭೂಮಿಯನ್ನು ವಸತಿ ಬಡಾವಣೆಗಳನ್ನಾಗಿ ನಿರ್ಮಿಸುತ್ತಿರುವ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೮೫ (೩೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಲ್ಲಾ ಭಾಗದಲ್ಲೂ ಕೃಷಿ ಭೂಮಿಯನ್ನು ವಾಸದ ಬಡಾವಣೆಯಾಗಿ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕೃಷಿ ಭೂಮಿಯನ್ನು ಭೂ ಪರಿವರ್ತನೆಗೊಳಿಸದೆ ಬಡಾವಣೆ ನಿರ್ಮಿಸಿ, ಆ ಜಾಗದಲ್ಲಿ ಕಟ್ಟಡದ ನಿರ್ಮಾಣ ಮಾಡಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಬರಬೇಕಾದ ಆದಾಯವನ್ನು ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೊಳಗೇರಿಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೬ (೨೧೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬೆಂಗಳೂರು ಸೇರಿದಂತೆ ಇರುವ ಕೊಳಗೇರಿಗಳ ಸಂಖ್ಯೆ ಎಷ್ಟು ;

(ಆ) ಈ ಕೊಳಗೇರಿಗಳಲ್ಲಿ ಅಧಿಸೂಚಿತ ಹಾಗೂ ಅಧಿಸೂಚಿತವಲ್ಲದ ಕೊಳಗೇರಿಗಳ ಸಂಖ್ಯೆ ಎಷ್ಟು ;

(ಇ) ಕಳೆದ ೩ ವರ್ಷಗಳ ಅವಧಿಯಲ್ಲಿ ಕೊಳಗೇರಿಗಳ ಅಭಿವೃದ್ಧಿಗಾಗಿ ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ ಕೇಂದ್ರ ಸರ್ಕಾರದಿಂದ ಬಂದ ಅನುದಾನ ಎಷ್ಟು ;

(ಈ) ಈ ಅನುದಾನದಡಿಯಲ್ಲಿ ಸರ್ಕಾರ ಕೈಗೊಂಡ ವಿವಿಧ ಯೋಜನೆಗಳು ಯಾವುವು ? (ವರ್ಷವಾರು ಮಾಹಿತಿ ಒದಗಿಸುವುದು)

## ಸಂಚಾರಿ ಕೃಷಿ ಹೆಲ್ತ್ ಕ್ಲಿನಿಕ್ ಸ್ಥಾಪನೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೭ (೨೨೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿಯಲ್ಲಿ ಕಾಲಕಾಲಕ್ಕೆ ಮಣ್ಣು ನೀರು ಪರೀಕ್ಷಿಸಲು ಮತ್ತು ಇತರೆ ತಾಂತ್ರಿಕ ನೆರವಿಗಾಗಿ "ಸಂಚಾರಿ ಕೃಷಿ ಹೆಲ್ತ್ ಕ್ಲಿನಿಕ್" ಗಳನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಈ ತರಹದ ಕ್ಲಿನಿಕ್‌ಗಳ ಉದ್ದೇಶಕ್ಕಾಗಿ ಎಷ್ಟು ಹಣವನ್ನು ಮೀಸಲಿಡಲಾಗಿದೆ ;

(ಇ) ಪ್ರಸಕ್ತ ಸಾಲಿನಲ್ಲಿ ಎಷ್ಟು ವಾಹನಗಳನ್ನು ಸದರಿ ಉದ್ದೇಶಕ್ಕಾಗಿ ಖರೀದಿಸಲಾಗಿದೆ ;

(ಈ) ಈ ಯೋಜನೆಯಡಿಯಲ್ಲಿ ಎಷ್ಟು ಹಳ್ಳಿಗಳಿಗೆ ಭೇಟಿ ನೀಡಿ ರೈತರಿಗೆ ಸಹಾಯ ಮಾಡಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ನೀರು ಮತ್ತು ಗೊಬ್ಬರದ ಬಳಕೆ ಹೆಚ್ಚಿಸಿ ಕೃಷಿ ಉತ್ಪಾದನೆ ಹೆಚ್ಚಳ ಮಾಡುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೮ (೨೨೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೀರು ಮತ್ತು ಗೊಬ್ಬರಗಳ ಸದ್ಬಳಕೆಯಿಂದ ಕೃಷಿ ಉತ್ಪಾದನೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸಾಮರ್ಥ್ಯ ಅಭಿವೃದ್ಧಿ ಮತ್ತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆಯೇ ;

(ಆ) ಈ ಉದ್ದೇಶಕ್ಕಾಗಿ ರಾಜ್ಯಾದಾದ್ಯಂತ ಎಷ್ಟು ಪ್ರಾತ್ಯಕ್ಷಿಕೆಗಳನ್ನು ಅಭಿವೃದ್ಧಿಪಡಿಸಲಾಗಿದೆ ;

(ಇ) ಸದರಿ ಕಾರ್ಯಕ್ರಮಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಈ ಕಾರ್ಯಕ್ರಮದ ಉದ್ದೇಶದಿಂದ ಉಪಯೋಗ ಪಡೆದುಕೊಂಡ ರೈತರುಗಳ ಸಂಖ್ಯೆ ಎಷ್ಟು ?

## ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ರಸ್ತೆ ನಿರ್ವಹಣೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೯ (೨೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳು ಅತಿವೃಷ್ಟಿ, ಪ್ರವಾಹದಿಂದಾಗಿ ತೀರಾ ಹದಗೆಟ್ಟಿದ್ದು, ಕನಿಷ್ಠ ನಿರ್ವಹಣೆಯಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಸ್ತೆ ನಿರ್ಮಿಸಲು ಮತ್ತು ಸರಿಯಾದ ನಿರ್ವಹಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಜ್ಯದಲ್ಲಿ ೨೦೧೭-೧೮, ೨೦೧೮-೧೯ ಹಾಗೂ ೨೦೧೯-೨೦ನೇ ಸಾಲಿನಲ್ಲಿ ಒಟ್ಟು ಎಷ್ಟು ಹೆದ್ದಾರಿ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ; ಈ ಯೋಜನೆಗೆ ಸರ್ಕಾರದಿಂದ ಮೀಸಲಿಟ್ಟಿದ್ದ ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು; (ವಿವರ ಒದಗಿಸುವುದು)

(ಈ) ೨೦೧೭-೧೮, ೨೦೧೮-೧೯ ಹಾಗೂ ೨೦೧೯-೨೦ನೇ ಸಾಲಿನಲ್ಲಿ ನಬಾರ್ಡ್, ೩೦೫೪, ಸಿಆರ್‌ಎಫ್, ಎಸ್‌ಸಿಪಿ/ ಟಿಎಸ್‌ಪಿ, ಅಪೆಂಡಿಕ್ಸ್ ಯೋಜನೆಗಳಡಿ ಬೆಳಗಾವಿ ಜಿಲ್ಲೆಗೆ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಉ) ಇದರಲ್ಲಿ ಚಿಕ್ಕೋಡಿ ಸದಲಗಾ ವಿಧಾನ ಸಭಾ ಕ್ಷೇತ್ರಕ್ಕೆ ೨೦೧೭-೧೮, ೨೦೧೮-೧೯ ಹಾಗೂ ೨೦೧೯-೨೦ನೇ ಸಾಲಿನಲ್ಲಿ ಬಿಡುಗಡೆಯಾದ ಒಟ್ಟು ಅನುದಾನವೆಷ್ಟು ; ಸದರಿ ಕಾಮಗಾರಿಗಳು ಪೂರ್ಣಗೊಂಡಿವೆಯೇ; ಇಲ್ಲದಿದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ? (ವಿವರ ಒದಗಿಸುವುದು)

## ಮೀನುಗಾರಿಕಾ ತಾಂತ್ರಿಕತೆಯನ್ನು ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೦ (೨೨೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕ ಭಾಗದಲ್ಲಿ ಮೀನುಸಾಗಾಣಿಕೆ ಮತ್ತು ಸಂಸ್ಕರಣೆಗಳಿಗೆ ಸಾಕಷ್ಟು ಅನುಕೂಲಕರವಾದ ವಾತಾವರಣ ಹಾಗೂ ಜಲಸಂಪನ್ಮೂಲವಿದ್ದರೂ ಅದರ ಅಭಿವೃದ್ಧಿಗೆ ಸರ್ಕಾರ ಗಮನಹರಿಸದಿರಲು ಕಾರಣವೇನು ;

(ಆ) "ಕರ್ನಾಟಕ ಮತ್ಸ್ಯ ವಿಕಾಸ ಯೋಜನೆ" ಯಡಿಯಲ್ಲಿ ಮೀನುಗಾರಿಕಾ ತಾಂತ್ರಿಕತೆಯನ್ನು ಪ್ರೋತ್ಸಾಹಿಸಲು ಸರ್ಕಾರ ಯೋಜನೆ ಹಮ್ಮಿಕೊಂಡಿದೆಯೇ ;

(ಇ) ಹಾಗಿದ್ದಲ್ಲಿ, ಈ ಯೋಜನೆಯನ್ನು ಉತ್ತರ ಕರ್ನಾಟಕದ ಯಾವ ಯಾವ ಸ್ಥಳಗಳಲ್ಲಿ ಜಾರಿಗೆ ತರಲು ಯೋಚಿಸಲಾಗಿದೆ ;

(ಈ) ಈ ಯೋಜನೆಯ ಅನುಷ್ಠಾನಕ್ಕಾಗಿ ಮೀಸಲಿಟ್ಟ ಒಟ್ಟು ಅನುದಾನವೆಷ್ಟು ? (ವಿವರ ನೀಡುವುದು)

**ಮೈಸೂರು ಮತ್ತು ಮಂಡ್ಯ ವಿಭಾಗಗಳ ಗುತ್ತಿಗೆದಾರರಿಗೆ ಎಲ್.ಓ.ಸಿ ಬಗ್ಗೆ**

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೧ (೨೫೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯ ಮೈಸೂರು ಮತ್ತು ಮಂಡ್ಯ ವಿಭಾಗಗಳಲ್ಲಿ ಗುತ್ತಿಗೆದಾರರಿಗೆ ನೀಡಬೇಕಾಗಿರುವ ಬಾಕಿ ಮೊತ್ತವೆಷ್ಟು ; (ಲೆಕ್ಕಶೀರ್ಷಿಕೆವಾರು ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ಯಾವ ಯಾವ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಎಷ್ಟು ಮಂದಿ ಗುತ್ತಿಗೆದಾರರಿಗೆ ಎಷ್ಟು ಕಂತುಗಳಲ್ಲಿ ಎಷ್ಟು ಮೊತ್ತದ ಹಣ ಭರವಸೆ ಪತ್ರ (ಎಲ್.ಓ.ಸಿ) ಹಂಚಿಕೆ ಮಾಡಲಾಗಿದೆ ;

(ಇ) ಸದರಿ ಹಣ ಭರವಸೆ ಪತ್ರ (ಎಲ್.ಒ.ಸಿ) ಹಂಚಿಕೆ ಮಾಡುವಲ್ಲಿ ಅನುಸರಿಸಲಾಗಿರುವ ಮಾನದಂಡಗಳೇನು; (ವಿವರ ನೀಡುವುದು)

(ಈ) ಮಾನದಂಡಗಳನ್ನು ಅನುಸರಿಸದೆ ಹಣ ಹಂಚಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕೃಷಿ ಯಂತ್ರೋಪಕರಣಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೨ (೩೧೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿ ಬೆಳೆ ಕಟಾವು ಪ್ರಾರಂಭವಾಗಿದ್ದು, ಕೃಷಿ ಯಂತ್ರೋಪಕರಣಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದುವರೆವಿಗೂ ಕೃಷಿ ಯಂತ್ರೋಪಕರಣಗಳನ್ನು ಒದಗಿಸದೆ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯಲ್ಲಿ ಕೃಷಿ ಯಂತ್ರೋಪಕರಣಗಳನ್ನು ಸರಬರಾಜು ಮಾಡಲಾಗುವುದು ?

## ಕೃಷಿ ಸಂಸ್ಕರಣ ಯೋಜನೆಯ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೩ (೩೨೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ, ಮೈಸೂರು, ಚಾಮರಾಜನಗರ ಮತ್ತು ಹಾಸನ ಜಿಲ್ಲೆಗಳಲ್ಲಿನ ಸಣ್ಣ ಮತ್ತು ಅತಿ ಸಣ್ಣ ಹಾಗೂ ಎಸ್.ಟಿ.ಪಿ ಮತ್ತು ಟಿ.ಎಸ್.ಪಿ ರೈತರ ಸಂಖ್ಯೆ ಎಷ್ಟು ;

(ಆ) ಸದರಿಯವರಿಗೆ ಕೃಷಿ ಸಂಸ್ಕರಣ ಯೋಜನೆಯಲ್ಲಿ ಪ್ರಸಕ್ತ ಸಾಲಿನಲ್ಲಿ ನಿಗಧಿಪಡಿಸಿರುವ ಟಾರ್ಪಲ್‌ಗಳ ಸಂಖ್ಯೆ ಎಷ್ಟು ;

(ಇ) ಇದುವರೆವಿಗೂ ಫಲಾನುಭವಿಗಳಿಗೆ ವಿತರಿಸಲಾಗಿರುವ ಟಾರ್ಪಲ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ಟಾರ್ಪಲ್‌ಗಳನ್ನು ಒದಗಿಸಲಾಗುವುದು;

(ಉ) ನಿಯಮ ಪಾಲನೆ ಮಾಡದೆ ಹಣ ಹಂಚಿಕೆ ಮಾಡಿರುವ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಗೋಮಾಳ ಜಮೀನನ್ನು ಅತಿಕ್ರಮಣ ಮಾಡಿರುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೯೪ (೩೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು, ಹೊಣಕೆರೆ ಹೋಬಳಿಯ ಮರಡಿಪುರ ಗ್ರಾಮ ಹಾಗೂ ಹೊಣಕೆರೆ ಹೋಬಳಿಯಲ್ಲಿ ಇರುವ ಗ್ರಾಮಗಳಲ್ಲಿ ಇರುವಂತಹ ಸರ್ಕಾರಿ ಗೋಮಾಳಗಳು ಎಷ್ಟು ; (ಗ್ರಾಮಗಳವಾರು ಸಂಪೂರ್ಣ ಮಾಹಿತಿ ನೀಡುವುದು) ಮರಡಿಪುರ ಗ್ರಾಮದಲ್ಲಿರುವ ಶ್ರೀ ರಂಗನಾಥ ಸ್ವಾಮಿ ಬೆಟ್ಟ ಹಾಗೂ ಸುತ್ತಮುತ್ತಲಿನಲ್ಲಿರುವ ಗೋಮಾಳಗಳ ವಿಸ್ತೀರ್ಣ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಶ್ರೀ ರಂಗನಾಥ ಸ್ವಾಮಿ ಬೆಟ್ಟಕ್ಕೆ ಸೇರಿರುವ ಜಾಗ ಎಷ್ಟು; ಹಾಗೂ ಬೆಟ್ಟದ ಪಕ್ಕದಲ್ಲಿರುವ ಗೋಮಾಳ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಶ್ರೀ ರಂಗನಾಥ ಸ್ವಾಮಿ ಬೆಟ್ಟದಲ್ಲಿ ಗೋಮಾಳವನ್ನು ಕೆಲವು ಜನರು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ; (ಗೋಮಾಳವನ್ನು ಉಪಯೋಗಿಸುತ್ತಿರುವ ರೈತರ ಹೆಸರು ವಿಳಾಸ ಹಾಗೂ ಅವರು ಗೋಮಾಳದಲ್ಲಿ ಬೆಳೆಯುತ್ತಿರುವ ಆಹಾರ ಪದಾರ್ಥಗಳ ಸಂಪೂರ್ಣ ಮಾಹಿತಿ ನೀಡುವುದು)

(ಈ) ಮರಡಿ ಗ್ರಾಮದಿಂದ ಕೆಂಪನಕೊಪ್ಪಲಿಗೆ ಹೋಗುವ ರಸ್ತೆಯನ್ನು ಸಂಪೂರ್ಣವಾಗಿ ರೈತರು ಉಪಯೋಗಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೆಂಪನಕೊಪ್ಪಲು ಗ್ರಾಮಕ್ಕೆ ಸಾರ್ವಜನಿಕರು ಹಾಗೂ ಎತ್ತಿನ ಬಂಡಿಗಳು ಹೋಗಲು ಈ ರಸ್ತೆಯನ್ನು ಯಾವಾಗ ತೆರವುಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಅರ್ಚಕರ ವೇತನ/ತಸ್ತಿಕ್ ಭತ್ಯೆಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೯೫ (೩೨೨) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಎಷ್ಟು ;

(ಆ) ಮುಜರಾಯಿ ದೇವಾಲಯಗಳಲ್ಲಿನ ಅರ್ಚಕರಿಗೆ ನಿಗಧಿಪಡಿಸಿರುವ ವೇತನ/ತಸ್ತಿಕ್ ಭತ್ಯೆ ಹಾಗೂ ಇತರೆ ಸೌಲಭ್ಯಗಳೇನು ; (ವಿವರ ನೀಡುವುದು)

(ಇ) ಈ ಸಂಬಂಧ ಅರ್ಚಕರಿಗೆ ನೀಡಬೇಕಾಗಿರುವ ಬಾಕಿ ಮೊತ್ತವೆಷ್ಟು ಹಾಗೂ ಯಾವ ಕಾಲಮಿತಿಯಲ್ಲಿ ಬಾಕಿ ಮೊತ್ತವನ್ನು ಬಿಡುಗಡೆಗೊಳಿಸಲಾಗುವುದು ;

(ಈ) ಕಳೆದ ೨ ವರ್ಷಗಳಿಂದ ಯಾವ ಯಾವ ದೇವಾಲಯಗಳ ಅಭಿವೃದ್ಧಿಗೆ ಯಾವ ಯಾವ ಯೋಜನೆಯಲ್ಲಿ ಎಷ್ಟು ಹಣವನ್ನು ಬಿಡುಗಡೆಗೊಳಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಕೃಷಿ ಭಾಗ್ಯ ಯೋಜನೆಯ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೯೬ (೨೮೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಕೃಷಿ ಭಾಗ್ಯ ಯೋಜನೆ"ಯಡಿ ಕೃಷಿಹೊಂಡ, ಪಾಲಿಹೌಸ್ ಮತ್ತು ನೆರಳುಪರದೆ ಮನೆಗಳನ್ನು ನಿರ್ಮಿಸಲು ಒದಗಿಸುತ್ತಿರುವ ಅನುದಾನದ ಮೊತ್ತವೆಷ್ಟು; ಯಾವ ರೈತರುಗಳು ಸದರಿ ಯೋಜನೆಗೆ ಅರ್ಹರಾಗಿರುತ್ತಾರೆ ;

(ಆ) ಕಳೆದ ೦೩ ವರ್ಷಗಳಲ್ಲಿ ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ವ್ಯಾಪ್ತಿಯಲ್ಲಿ "ಕೃಷಿ ಭಾಗ್ಯ ಯೋಜನೆ"ಯಡಿ ಪ್ರಯೋಜನ ಪಡೆದ ರೈತರುಗಳ ಸಂಖ್ಯೆ ಎಷ್ಟು ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಯೋಜನೆಗಳ ಮೊತ್ತವನ್ನು ಹೆಚ್ಚಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಸದರಿ ಯೋಜನೆಯ ಮೊತ್ತವನ್ನು ಹೆಚ್ಚಿಸಲಾಗುವುದು ?

## ಕಂದಾಯ ಇಲಾಖೆಯಲ್ಲಿ ಖಾಲಿಯಿರುವ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೯೭ (೨೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಂದಾಯ ಇಲಾಖೆಯಲ್ಲಿ "ಸಿ" ಮತ್ತು "ಡಿ" ದರ್ಜೆಯ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಪ್ರಸ್ತುತ ಗ್ರಾಮಲೆಕ್ಕಾಧಿಕಾರಿಗಳ ಮತ್ತು ಸರ್ವೇಯರ್‌ಗಳ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಅವುಗಳಲ್ಲಿ ಮಂಜೂರಾದ ಮತ್ತು ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ;

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಉ) ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು ?

## ಸರ್ಕಾರಿ ಜಮೀನನ್ನು ಖಾಸಗಿಯವರಿಗೆ ಪರಭಾರೆ ಮಾಡುತ್ತಿರುವ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೯೮ (೨೬೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಮೀನು ಎಷ್ಟು; ಈ ಜಮೀನನ್ನು ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ ; (ವಿವರಗಳನ್ನು ನೀಡುವುದು)

(ಆ) ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಲು ಕೆಲ ಸರ್ಕಾರಿ ಅಧಿಕಾರಿಗಳು ಪ್ರಯತ್ನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಪೂರ್ಣ ವಿವರಗಳನ್ನು ನೀಡುವುದು ;

(ಈ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳನ್ನು ವಜಾ ಮಾಡಲು ಸರ್ಕಾರ ಹಿಂದೇಟು ಹಾಕುತ್ತಿರುವುದು ನಿಜವೇ ?

## ಸರ್ಕಾರಿ ಜಮೀನಿನ ವಿಸ್ತೀರ್ಣ ಕುರಿತು

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೧೯೯ (೨೬೮) ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಉತ್ತರ ತಾಲ್ಲೂಕಿನ ವ್ಯಾಪ್ತಿಗೆ ಬರುವ ವಿಧಾನಸಭಾ ಕ್ಷೇತ್ರಗಳು ಯಾವುವು; ಈ ಕ್ಷೇತ್ರಗಳಲ್ಲಿ ಸರ್ಕಾರಿ ಜಮೀನಿನ ವಿಸ್ತೀರ್ಣ ಎಷ್ಟು; (ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಈ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಜಮೀನುಗಳನ್ನು ಖಾಸಗಿಯವರಿಗೆ ಪರಭಾರೆ ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

(ಇ) ಸದರಿ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿ/ನೌಕರರುಗಳು ಯಾರ್‍ಯಾರು;

(ಈ) ಇಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರವು ಕೈಗೊಂಡ ಕ್ರಮಗಳೇನು ?

## ಜನಸಾಮಾನ್ಯರಿಗೆ ನೀಡುತ್ತಿರುವ ಸವಲತ್ತುಗಳ ಬಗ್ಗೆ

**ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-**

೨೦೦ (೨೬೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಂದಾಯ ಇಲಾಖೆ ವತಿಯಿಂದ ನಾಗರಿಕರಿಗೆ/ಜನಸಾಮಾನ್ಯರಿಗೆ ನೀಡುತ್ತಿರುವ ಸವಲತ್ತುಗಳು ಯಾವುವು;

(ಆ) ಈ ಸವಲತ್ತುಗಳಿಗೋಸ್ಕರ ಸರ್ಕಾರ ಮೀಸಲಿಟ್ಟಿರುವ ಹಣ ಎಷ್ಟು; ಕಳೆದ ೫ ವರ್ಷಗಳಿಂದ ಮೇಲ್ಕಂಡ ಸವಲತ್ತುಗಳಿಗಾಗಿ ಸರ್ಕಾರ ಖರ್ಚು ಮಾಡಿರುವ ಹಣ ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಇ) ಈ ಸವಲತ್ತುಗಳನ್ನು ನೀಡುವಲ್ಲಿ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಖ್ಯೆ ಎಷ್ಟು; ಅಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿ/ ನೌಕರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?

## ಬಿ.ಬಿ.ಎಂ.ಪಿ ವ್ಯಾಪ್ತಿಗೆ ಒಳಪಡುವ ಜಮೀನನ್ನು ಅನಧಿಕೃತವಾಗಿ ನೋಂದಣಿ ಮಾಡುತ್ತಿರುವ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೧ (೨೭೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಬೆಂಗಳೂರು ಪೂರ್ವ ತಾಲ್ಲೂಕು, ಬಸವನಪುರ ಗ್ರಾಮದ ಸರ್ವೆ ನಂ.೨೬/೧ ರಲ್ಲಿರುವ ೪ ಎಕರೆ ೧೮ ಗುಂಟೆ ಸರ್ಕಾರದ ಗೋಮಾಳದ ಜಮೀನನ್ನು ಅನಧಿಕೃತವಾಗಿ ನೋಂದಣಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರೀತಿ ಅನಧಿಕೃತ ನೋಂದಣಿಯನ್ನು ರದ್ದುಪಡಿಸಲು ಸ್ಥಳೀಯ ಗ್ರಾಮಸ್ಥರು ಜಿಲ್ಲಾಧಿಕಾರಿಗಳಿಗೆ ಮತ್ತು ಆಯುಕ್ತರು, ಬಿ.ಬಿ.ಎಂ.ಪಿ ಇವರುಗಳಿಗೆ ಅರ್ಜಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅಕ್ರಮ ನೋಂದಣಿಗಳನ್ನು ರದ್ದುಪಡಿಸಲು ಸರ್ಕಾರದ ಮಾನದಂಡಗಳೇನು? (ವಿವರ ಒದಗಿಸುವುದು)

## ಲೋಕೋಪಯೋಗಿ ಇಲಾಖೆಯ ವಿವಿಧ ಶೀರ್ಷಿಕೆಗಳಡಿ ಕೈಗೊಂಡ ಕಾಮಗಾರಿಯ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೨ (೪೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೨ ವರ್ಷಗಳಿಂದ ಲೋಕೋಪಯೋಗಿ ಇಲಾಖೆಯ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿ ಕೈಗೊಂಡು ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಹಾಗೂ ಪಾವತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪಾವತಿಗೆ ಬಾಕಿಯಿರುವ ಬಿಲ್ಲುಗಳ ಒಟ್ಟು ಮೊತ್ತವೆಷ್ಟು;

(ಆ) ಕಳೆದ ೦೨ ವರ್ಷಗಳಿಂದ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಕಾಮಗಾರಿಗಳ ಬಿಲ್ಲುಗಳ ಮೊತ್ತವೆಷ್ಟು;

(ಇ) ಗುತ್ತಿಗೆದಾರರಿಗೆ ಸಮಯಕ್ಕೆ ಸರಿಯಾಗಿ ಕಾಮಗಾರಿಗಳ ಬಿಲ್ಲುಗಳ ಮೊತ್ತವನ್ನು ಪಾವತಿಸದೇ ಇರುವುದರಿಂದ ಗುತ್ತಿಗೆದಾರರು ತೊಂದರೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಈ ಗುತ್ತಿಗೆದಾರರಿಗೆ ಯಾವಾಗ ಹಣವನ್ನು ಬಿಡುಗಡೆ ಮಾಡಲಾಗುವುದು?

## ರಾಜ್ಯದಲ್ಲಿ ಸತತ ಮಳೆಯಿಂದ ಉಂಟಾಗಿರುವ ಹಾನಿಯ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೩ (೪೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನ ಆಗಸ್ಟ್‌ನಿಂದ ಸತತ ಮೂರು ತಿಂಗಳ ಮಳೆಯಿಂದಾಗಿ ರಾಜ್ಯದಲ್ಲಿ ಎಷ್ಟು ಹಾನಿಯಾಗಿದೆ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ಅತಿವೃಷ್ಠಿಯಿಂದ ಹಾನಿಗೆ ಪರಿಹಾರವಾಗಿ ಕೇಂದ್ರದಿಂದ ಎಷ್ಟು ಹಣವನ್ನು ಬಿಡುಗಡೆ ಮಾಡುವಂತೆ ಕೋರಲಾಗಿದೆ; ಹಾಗೂ ಕೇಂದ್ರದಿಂದ ಬಿಡುಗಡೆಯಾದ ಮೊತ್ತವೆಷ್ಟು;

(ಇ) ಅತಿವೃಷ್ಠಿಯಿಂದ ಹಾನಿಗೊಳಗಾದ ರಸ್ತೆಗಳು, ಸೇತುವೆಗಳು, ತೋಟಗಾರಿಕೆ, ಕೃಷಿ ಬೆಳೆಗಳು, ಜಾನುವಾರುಗಳು, ಮನೆಹಾನಿ ಹಾಗೂ ಇತರೆ ರೈತರು ಹಾಗೂ ಸಾರ್ವಜನಿಕರಿಗೆ ಉಂಟಾದ ತೊಂದರೆಗಳಿಗೆ ಸರ್ಕಾರವು ಯಾವ ರೀತಿಯ ಪರಿಹಾರ ಕ್ರಮ ಕೈಗೊಂಡಿದೆ? (ವಿವರ ಒದಗಿಸುವುದು)

## ಲೋಕೋಪಯೋಗಿ ಇಲಾಖೆಯ ವಿವಿಧ ಶೀರ್ಷಿಕೆಗಳಡಿ ಕೈಗೊಂಡ ಕಾಮಗಾರಿಯ ಕುರಿತು

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೦೪ (೪೨೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೪-೧೫ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ನೇಮಕ ಮಾಡಿಕೊಳ್ಳಲಾದ ಲೆಕ್ಕ ಸಹಾಯಕರುಗಳ ಸಂಖ್ಯೆ ಎಷ್ಟು; ಯಾವ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ; ಸದರಿಯವರಿಗೆ ಯಾವ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ವೇತನ ಪಾವತಿ ಮಾಡಲಾಗುತ್ತಿದೆ; (ವಿವರ ಒದಗಿಸುವುದು)

(ಆ) ಈ ರೀತಿ ನೇಮಕ ಮಾಡಿಕೊಂಡ ನೌಕರರನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಇದಕ್ಕೆ ಯಾವ ಮಾನದಂಡಗಳನ್ನು ರೂಪಿಸಲಾಗಿದೆ;

(ಇ) ಕೃಷಿ ಇಲಾಖೆಯಲ್ಲಿ ಈ ರೀತಿ ಖಾಲಿ ಇರುವ ಹುದ್ದೆಗಳಿಗೆ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಇದೆಯೇ; ಇದ್ದಲ್ಲಿ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕ ಸಹಾಯಕರನ್ನು ನೇಮಕ ಮಾಡಿಕೊಳ್ಳಲು ಇರುವ ತೊಡಕುಗಳೇನು?

## ಬೆಂಗಳೂರು ವ್ಯಾಪ್ತಿಯಲ್ಲಿರುವ ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೦೫ (೪೨೦) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಮುಜರಾಯಿ ದೇವಸ್ಥಾನಗಳಿಗೆ ಸೇರಿರುವ ಆಸ್ತಿಗಳು ಯಾವುವು; (ದೇವಸ್ಥಾನಗಳ ಹೆಸರು ಹಾಗೂ ಆಸ್ತಿಗಳ ವಿವರ ನೀಡುವುದು)

(ಆ) ಮುಜರಾಯಿ ದೇವಸ್ಥಾನಗಳ ಆಸ್ತಿಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡಲಾಗಿದೆಯೇ;

(ಇ) ನೀಡಿದ್ದಲ್ಲಿ, ಯಾವ ಯಾವ ಸಂಸ್ಥೆಗಳಿಗೆ ಅಥವಾ ವ್ಯಕ್ತಿಗಳಿಗೆ ಗುತ್ತಿಗೆ ನೀಡಲಾಗಿದೆ?(ವಿವರ ನೀಡುವುದು)

## ರಾಜ್ಯದಲ್ಲಿ ಮೆಕ್ಕೆ ಜೋಳ ಬೆಳೆಯುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೨೦೬ (೨೫೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೆಕ್ಕೆಜೋಳ ಬೆಳೆಯಲು ಕೃಷಿ ಇಲಾಖೆಯಿಂದ ಉತ್ತೇಜಿಸಲಾಗುತ್ತಿದೆಯೇ; ಹಾಗಿದ್ದಲ್ಲಿ, ಎಷ್ಟು ವಿಸ್ತೀರ್ಣದಲ್ಲಿ ಮೆಕ್ಕೆಜೋಳ ಬೆಳೆಯಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಬೆಳೆ ಬೆಳೆಯಲು ಸರ್ಕಾರ ನೀಡುವ ಸೌಲಭ್ಯಗಳೇನು;

(ಇ) ಈ ಬೆಳೆಗೆ ಕೇಂದ್ರ ಸರ್ಕಾರ ಎಂಎಸ್‌ಪಿ ದರ ನಿಗದಿಪಡಿಸಿದೆಯೇ; ಮೆಕ್ಕೆ ಜೋಳವನ್ನು ರಾಜ್ಯ ಸರ್ಕಾರದಿಂದ ಖರೀದಿಸಲಾಗುತ್ತಿದೆಯೇ;

(ಈ) ಇದುವರೆಗೆ ಎಷ್ಟು ಕ್ವಿಂಟಾಲ್ ಮೆಕ್ಕೆಜೋಳ ಖರೀದಿಸಲಾಗಿದೆ? (ವಿವರ ನೀಡುವುದು)

## ರಾಜ್ಯದಲ್ಲಿರುವ ಕುಗ್ರಾಮಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):–**

೨೦೭ (೨೫೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕುಗ್ರಾಮ (ಹ್ಯಾಮಲೇಟ್)ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕುಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇದಕ್ಕೆ ಮೀಸಲಿಟ್ಟ ಹಣ ಎಷ್ಟು; (ವಿವರ ನೀಡುವುದು)

(ಇ) ೨೦೧೮–೧೯ ರಿಂದ ೨೦೨೦–೨೧ನೇ ಸಾಲಿನಲ್ಲಿ ಅತಿವೃಷ್ಟಿ ಅನಾವೃಷ್ಟಿಗೆ ಗುರಿಯಾದಂತಹ ಗ್ರಾಮಗಳು ಎಷ್ಟು; ಅವು ಯಾವುವು; (ವಿವರ ನೀಡುವುದು)

(ಈ) ಯಾವ ಯಾವ ಗ್ರಾಮಗಳಲ್ಲಿ ಅತಿವೃಷ್ಟಿ ಅನಾವೃಷ್ಟಿಯಿಂದ ಪ್ರಾಣ ಹಾನಿ, ಜನ–ಜಾನುವಾರುಗಳ ಹಾನಿ, ಆಸ್ತಿ–ಪಾಸ್ತಿಗಳ ನಷ್ಟ ಬೆಳೆ ಹಾನಿ ನಷ್ಟ ಹಾಗೂ ಮನೆಗಳು ನಷ್ಟವಾಗಿರುತ್ತದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಇಲ್ಲಿಯವರೆಗೆ ನೀಡಿದ ಪರಿಹಾರದ ಮೊತ್ತ ಎಷ್ಟು; ಪರಿಹಾರ ನೀಡಲು ಅನುಸರಿಸಿರುವ ಮಾನದಂಡಗಳೇನು?

## ಹೊಸ ಜಿಲ್ಲೆಗಳ ಸೃಜನೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):-**

೨೦೮ (೩೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸದಾಗಿ ಎಷ್ಟು ಜಿಲ್ಲೆಗಳನ್ನು ಸೃಜಿಸಲು ಸರ್ಕಾರ ನಿರ್ಧರಿಸಿದೆ;

(ಆ) ಬೆಳಗಾವಿ ಜಿಲ್ಲೆಯು ಅತಿ ದೊಡ್ಡ ಜಿಲ್ಲೆಯಾಗಿದ್ದು, ಇದನ್ನು ಎಷ್ಟು ಜಿಲ್ಲೆಗಳನ್ನಾಗಿ ವಿಭಾಗಿಸಲು ನಿರ್ಧರಿಸಲಾಗಿದೆ? (ವಿವರ ಒದಗಿಸುವುದು)

## ವಿಜಯಪುರದಲ್ಲಿ ಪ್ರವಾಹ ಪೀಡಿತರಿಗೆ ಮನೆಗಳನ್ನು ವಿತರಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು):-**

೨೦೯ (೩೧೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವಿಜಯಪುರ ಜಿಲ್ಲೆಯಲ್ಲಿ ಪ್ರವಾಹದಿಂದ ಹಾನಿಗೊಳಗಾದ ಮನೆಗಳ ಪುನರ್ ವಸತಿಗಾಗಿ ವಸತಿ ಇಲಾಖೆಯಿಂದ ನೀಡಲಾಗಿರುವ ಮನೆಗಳ ಸಂಖ್ಯೆ ಎಷ್ಟು;

(ಆ) ಪ್ರಸ್ತುತ ವರ್ಷದಲ್ಲಿ ಯಾವ ಯಾವ ಯೋಜನೆಗಳಡಿಯಲ್ಲಿ ಪ್ರವಾಹ ಪೀಡಿತರಿಗೆ ಹಾಗೂ ಇತರರಿಗೆ ಹಂಚಿಕೆಯಾಗಿರುವ ಮನೆಗಳೆಷ್ಟು? (ಪ್ರತಿ ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

## ಕಾಫಿ ತೋಟಗಳು ನಾಶವಾಗಿರುವ ಬಗ್ಗೆ

**ಶ್ರೀ. ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೦ (೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ತಿಂಗಳುಗಳಿಂದ ಸುರಿದ ಭಾರಿ ಮಳೆಯಿಂದ "ಕಾಫಿ ತೋಟಗಳು" ನಾಶವಾಗಿದ್ದು, ಇದರಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸಂಕಷ್ಟಕ್ಕೀಡಾದ ರೈತರಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ ಫಲಾನುಭವಿಗಳ ಸಂಪೂರ್ಣ ಮಾಹಿತಿ ಹಾಗೂ ಪರಿಹಾರದ ಮೊತ್ತದ ವಿವರ ನೀಡುವುದು;

(ಈ) ಪರಿಹಾರ ನೀಡದೇ ಇರುವ ರೈತರಿಗೆ ಯಾವ ಕಾಲಮಿತಿಯಲ್ಲಿ ಪರಿಹಾರ ನೀಡಲಾಗುವುದು; (ವಿವರ ನಿಡುವುದು)

(ಉ) ಯಾವ ಯಾವ ಮಾನದಂಡಗಳನ್ನು ಆಧರಿಸಿ ಪರಿಹಾರ ನೀಡಲಾಗಿದೆ ? (ವಿವರ ನೀಡುವುದು)

## ಅತಿವೃಷ್ಟಿಯಿಂದ ಉಂಟಾಗಿರುವ ಆಸ್ತಿ–ಪಾಸ್ತಿ ನಷ್ಟದ ಕುರಿತು

**ಶ್ರೀ. ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೧ (೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ತಿಂಗಳುಗಳಿಂದ ಸುರಿದ ಭಾರಿ ಮಳೆಯಿಂದ ಜಿಲ್ಲೆಯಲ್ಲಿ ಅಪಾರ ಪ್ರಮಾಣದ ಆಸ್ತಿ–ಪಾಸ್ತಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಮನೆ ಕಳೆದುಕೊಂಡವರಿಗೆ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ, ಅವರುಗಳ ವಿಳಾಸದೊಂದಿಗೆ ಸಂಪೂರ್ಣ ಮಾಹಿತಿ ಹಾಗೂ ಪರಿಹಾರದ ಮೊತ್ತದ ವಿವರ ನೀಡುವುದು;

(ಈ) ಪರಿಹಾರ ನೀಡದೇ ಇರುವವರಿಗೆ ಯಾವ ಕಾಲ ಮಿತಿಯಲ್ಲಿ ಪರಿಹಾರ ನೀಡಲಾಗುವುದು; (ವಿವರ ನೀಡುವುದು)

(ಉ) ಯಾವ ಯಾವ ಮಾನದಂಡನೆಗಳನ್ನು ಆಧರಿಸಿ ಪರಿಹಾರ ನೀಡಲಾಗಿದೆ? (ವಿವರ ನೀಡುವುದು)

## ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಶ್ರಯ ಮನೆ ನೀಡಲು ಅರ್ಜಿಗಳನ್ನು ಆಹ್ವಾನಿಸಿರುವ ಬಗ್ಗೆ

**ಶ್ರೀ ಆರ್.ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೨ (೨೪೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಶ್ರಯ ಮನೆಗಳನ್ನು ಹಂಚಿಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆಯೇ; ಆಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಅರ್ಜಿ ಹಾಕದವರಿಗೆ ಮತ್ತೆ ಅವಕಾಶವಿದೆಯೇ;

(ಆ) ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅರ್ಜಿ ಸಲ್ಲಿಸಿ ಆಯ್ಕೆಯಾದಂತಹ ಫಲಾನುಭವಿಗಳಲ್ಲಿ ೮೦,೦೦೦ ರೂ.ಗಳ ಹಣವನ್ನು ಪಾವತಿಸಿರುವರ ಸಂಖ್ಯೆ ಎಷ್ಟು;

(ಇ) ಯಾವ ದಿನಾಂಕದಂದ ಹಣವನ್ನು ಪಾವತಿಸಿರುತ್ತಾರೆ;

(ಈ) ಆಶ್ರಯ ಮನೆಗಳ ಕಾಮಗಾರಿಗಳು ಪ್ರಾರಂಭವಾಗಿವೆಯೇ; ಆಗದಿದ್ದಲ್ಲಿ, ಹಣ ಸಂದಾಯ ಮಾಡಿರುವವರಿಗೆ ಯಾವ ಕಾಲಮಿತಿಯೊಳಗೆ ಮನೆಗಳನ್ನು ಹಂಚಿಕೆ ಮಾಡಲಾಗುವುದು;

(ಉ) ಈ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು?

## ಲೋಕೋಪಯೋಗಿ ಇಲಾಖೆಯ ಎಸ್‌ಸಿಪಿ/ಟಿಎಸ್‌ಪಿ ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೩ (೨೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಲೋಕೋಪಯೋಗಿ ಇಲಾಖೆಯಿಂದ ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ಮಂಜೂರಾದ ಅನುದಾನ ಎಷ್ಟು; (ವರ್ಷವಾರು, ತಾಲ್ಲೂಕುವಾರು ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಕಾಮಗಾರಿಯ ಸ್ಥಳ (ಗ್ರಾಮ), ಕಾಮಗಾರಿಗೆ ತಗುಲಿದ ವೆಚ್ಚ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರು, ವಿಧಾನಸಭಾ ಕ್ಷೇತ್ರವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಕೈಗೊಳ್ಳದೇ ಬೇರೆ ಬೇರೆ ಕಡೆಗಳಲ್ಲಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕಾರಣಕರ್ತರಾದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆಯೇ; (ವಿವರ ಒದಗಿಸುವುದು)

## ಸರ್ಕಾರಿ ಜಮೀನು ಒತ್ತುವರಿ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೪ (೨೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ತಾಲ್ಲೂಕು ವ್ಯಾಪ್ತಿಯಲ್ಲಿರುವ ಒಟ್ಟು ಸರ್ಕಾರಿ ಜಮೀನು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಪೈಕಿ ಸರ್ಕಾರಿ ಜಮೀನು ಒತ್ತುವರಿಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಇ) ಸದರಿ ಪ್ರಕರಣಗಳಲ್ಲಿ ಎಷ್ಟು ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸಲಾಗಿದೆ; ಅವು ಯಾವುವು; ಅವುಗಳನ್ನು ಸಂರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸರ್ವೇ ನಂಬರ್‌ಗಳೊಂದಿಗೆ ವಿವರ ನೀಡುವುದು)

(ಈ) ಉಳಿದ ಒತ್ತುವರಿ ಜಮೀನನ್ನು ತೆರವುಗೊಳಿಸಲು ಕೈಗೊಂಡಿರುವ ಕ್ರಮಗಳೇನು? (ಸ್ಪಷ್ಟ ಮಾಹಿತಿ ನೀಡುವುದು)

## ಲೋಕೋಪಯೋಗಿ ಇಲಾಖೆಯ ರಸ್ತೆ, ಕಟ್ಟಡಗಳ ಅಭಿವೃದ್ಧಿಯ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೫ (೨೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ರಸ್ತೆ ಮತ್ತು ಕಟ್ಟಡದ ಕಾಮಗಾರಿಗಳ ವರ್ಷವಾರು ಮಾಹಿತಿಯನ್ನು ಒದಗಿಸುವುದು;

(ಆ) ಈ ಅವಧಿಯಲ್ಲಿ ಜಿಲ್ಲೆಯಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಅಭಿವೃದ್ಧಿಪಡಿಸಲಾಗಿದೆ; ಅದರಲ್ಲಿ ಎಷ್ಟು ಕಿ.ಮೀ. ರಸ್ತೆಯನ್ನು ಹೊಸದಾಗಿ ನಿರ್ಮಿಸಲಾಯಿತು. ಹಾಗೂ ಎಷ್ಟು ಕಿ.ಮೀ. ರಸ್ತೆಯನ್ನು ಮೇಲ್ದರ್ಜೆಗೇರಿಸಲಾಯಿತು; (ಉದ್ದ ಮತ್ತು ಅಗಲದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಮೇಲ್ಕಂಡ ಪ್ರತಿ ಕಾಮಗಾರಿಗೆ ಪ್ರತಿ ವರ್ಷ ವೆಚ್ಚ ಮಾಡಲಾದ ಹಣವೆಷ್ಟು; ಈ ಪೈಕಿ ರಾಜ್ಯ ಸರ್ಕಾರದ ಮತ್ತು ಕೇಂದ್ರ ಸರ್ಕಾರಗಳಿಂದ ಭರಿಸಿದ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಈ) ಈ ಕಾಮಗಾರಿಗಳನ್ನು ನಿರ್ವಹಿಸುತ್ತಿರುವ ಗುತ್ತಿಗೆದಾರರು ಯಾರು ಮತ್ತು ಕಾಮಗಾರಿಗಳನ್ನು ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗಿದೆ; ಅಪೂರ್ಣಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ಒದಗಿಸುವುದು)

## ಹೆದ್ದಾರಿ ರಸ್ತೆಗಳ ಅಗಲೀಕರಣ ಬಗ್ಗೆ.

**ಶ್ರೀ ಹೆಚ್.ಎಂ. ರಮೇಶ್‌ಗೌಡ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) :-**

೨೧೬ (೨೫೮) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಾದ್ಯಂತ ಬೃಹತ್ ಹೆದ್ದಾರಿಗಳ ನಿರ್ಮಾಣಕ್ಕಾಗಿ ಹಾಗೂ ಎಕ್ಸ್ ಪ್ರೆಸ್ ಕಾರಿಡಾರ್ ನಿರ್ಮಾಣಕ್ಕಾಗಿ ಹಾಲಿ ಇರುವ ರಸ್ತೆಗಳನ್ನು ಅಗೆದು ಹಾಕಲಾಗಿದ್ದು, ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ಶೀಘ್ರವಾಗಿ ರಸ್ತೆ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಕಳೆದ ಎರಡು ವರ್ಷಗಳಿಂದ ಬೆಂಗಳೂರು-ಮಂಗಳೂರು ಹೆದ್ದಾರಿಯಲ್ಲಿ ಹಾಸನದಿಂದ ಸಕಲೇಶಪುರ ಮಾರ್ಗ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಎರಡೂ ಯೋಜನೆಗಳನ್ನು ಪೂರ್ಣಗೊಳಿಸಲು ಅಂತಿಮ ಕಾಲಮಿತಿ ನಿಗದಿ ಪಡಿಸಲಾಗಿದೆಯೇ? (ಮಾಹಿತಿ ನೀಡುವುದು)

## ವಸತಿ ಯೋಜನೆಗಳಲ್ಲಿ ವಸತಿ ಹೀನರಿಗೆ ವಸತಿ ಕಲ್ಪಿಸುವ ಬಗ್ಗೆ

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೭ (೨೫೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿವಿಧ ವಸತಿ ಯೋಜನೆಯಡಿಯಲ್ಲಿ ವಸತಿ ರಹಿತರಿಗೆ ಮನೆಗಳನ್ನು ಕಲ್ಪಿಸುವ ಕಾರ್ಯಕ್ರಮವು ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದಲ್ಲಿ ಈ ಯೋಜನೆ ಪೂರ್ಣಗೊಳಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ;(ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಿಗೆ ಬಿಡುಗಡೆಯಾದ ಖರ್ಚಾದ ಹಾಗೂ ಬಾಕಿ ಉಳಿದ ಹಣ ಎಷ್ಟು ; (ಅಂಕಿ ಅಂಶಗಳ ಸಹಿತ ಮಾಹಿತಿ ನೀಡುವುದು)

(ಇ) ಫಲಾನುಭವಿಗಳಿಗೆ ಸರಿಯಾದ ಸಮಯಕ್ಕೆ ಬಿಲ್‌ಗಳು ಆಗದಿರುವುದರಿಂದ ಮನೆಗಳು ಅಪೂರ್ಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಮನೆಗಳು ಅಪೂರ್ಣವಾಗಿ ಉಳಿದಿವೆ;

(ಈ) ಕೊಳಗೇರಿ ಅಭಿವೃದ್ಧಿಗಾಗಿ ವಸತಿ ಇಲಾಖೆ ರೂಪಿಸಿರುವ ಸೂರು ಯೋಜನೆಯೂ ರಾಜ್ಯದ ಎಲ್ಲಾ ಕೊಳಗೇರಿಗಳಲ್ಲೂ ಅನುಷ್ಠಾನಗೊಂಡಿದೆಯೇ ಇದಕ್ಕೆ ಮೀಸಲಿಟ್ಟಿರುವ ಹಣ ಎಷ್ಟು? (ಅಂಕಿ ಅಂಶಗಳ ಸಹಿತ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಡುವ ದೇವಾಲಯಗಳ ಕುರಿತು

**ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೧೮ (೨೬೧) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮುಜರಾಯಿ (ಧಾರ್ಮಿಕ ದತ್ತಿ) ವ್ಯಾಪ್ತಿಗೆ ಒಳಪಡುವ ಎಷ್ಟು ದೇವಾಲಯಗಳಿವೆ; ಇವುಗಳಲ್ಲಿ ಎ ದರ್ಜೆಯ ಬಿ ದರ್ಜೆ, ಸಿ ದರ್ಜೆ ದೇವಾಲಯಗಳು ಯಾವುವು;

(ಆ) ಇವುಗಳಲ್ಲಿ ಎ,ಬಿ,ಸಿ ದರ್ಜೆಗಳನ್ನು ಯಾವ ಮಾನದಂಡದಲ್ಲಿ ನಿರ್ಧರಿಸಲಾಗುವುದು (ವಿವರ ನೀಡುವುದು)

(ಇ) ಸದರಿ ದೇವಾಲಯಗಳ ಅರ್ಚಕರಿಗೆ ಸರ್ಕಾರದಿಂದ ಎಷ್ಟು ವೇತನ ಪಾವತಿಯಾಗುತ್ತಿದೆ ಪ್ರಸಕ್ತ ಸಾಲಿನಲ್ಲಿ ಪಾವತಿಯಾದ ವೇತನವೆಷ್ಟು;

(ಈ) ಪ್ರಸಕ್ತ ಸಾಲಿನಲ್ಲಿ ದೇವಾಲಯಗಳ ಜೀರ್ಣೋದ್ಧಾರ ಹಾಗೂ ಇತ್ಯಾದಿ ಕಾರ್ಯಕ್ರಮಗಳಿಗಾಗಿ ಮೀಸಲಿಟ್ಟ ಹಣವೆಷ್ಟು; ಹಾಗೂ ಖರ್ಚಾದ ಹಣ ಎಷ್ಟು ?

## ಬೆಳೆ ಸಮೀಕ್ಷೆ ಆಪ್‌ನಲ್ಲಿ ತಾಂತ್ರಿಕ ದೋಷಗಳಿರುವ ಬಗ್ಗೆ

**ಶ್ರೀ ಹೆಚ್.ಎಂ.ರಮೇಶಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೨೧೯ (೨೬೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳೆ ಸಮೀಕ್ಷೆ ಆಪ್‌ನಲ್ಲಿ ತಾಂತ್ರಿಕ ದೋಷಗಳು ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ರೈತರ ಹೆಸರಿನಲ್ಲಿ ರಸಗೊಬ್ಬರ ಖರೀದಿಯಲ್ಲಿ ಕೆಲವು ಖಾಸಗಿ ಸಂಸ್ಥೆಗಳು ನಕಲಿ ಬಿಲ್‌ಗಳನ್ನು ನೀಡಿ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ರಾಜ್ಯದ ಸ್ಥಳೀಯ ಭತ್ತದ ತಳಿಗಳ ಅಭಿವೃದ್ಧಿ ಮತ್ತು ಸಮಗ್ರ ಕೃಷಿ ಸಾವಯವ ವ್ಯವಸಾಯ ಮುಂತಾದ ಕಾರ್ಯಕ್ರಮಗಳಿಗೆ ಪ್ರಸಕ್ತ ಸಾಲಿನಲ್ಲಿ ಎಷ್ಟು ಹಣ ಮೀಸಲಿಡಲಾಗಿತ್ತು; ಖರ್ಚಾದ ಹಣ ಎಷ್ಟು;

(ಈ) ರಾಜ್ಯದ ಕೆಲವೆಡ ಈ ವರ್ಷ ಈರುಳ್ಳಿ ಬೆಳೆ ಸಂಪೂರ್ಣವಾಗಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈರುಳ್ಳಿ ರೈತರ ಹಿತರಕ್ಷಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಅನಧಿಕೃತ ವಸತಿ (Layout)ಗಳ ನಿರ್ಮಾಣದ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೨೦ (೨೫೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಜಿಲ್ಲೆ ವ್ಯಾಪ್ತಿಯಲ್ಲಿ ಕಂದಾಯ ಕೃಷಿ ಭೂಮಿಗಳಲ್ಲಿ ಅನಧಿಕೃತ ವಸತಿ ಸಮುಚ್ಚಯಗಳು/ಬಡಾವಣೆಗಳು

(Layout) ತಲೆ ಎತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ಗ್ರಾಮವಾರು ಸಂಪೂರ್ಣ ವಿವರ ನೀಡುವುದು)

(ಆ) ಭೂ ಪರಿವರ್ತನೆಯಾಗದಿರುವ ಸದರಿ ಜಮೀನುಗಳಲ್ಲಿ ಮನೆಗಳನ್ನು (ಬಡಾವಣೆಗಳನ್ನು) ಅನಧಿಕೃತವಾಗಿ ನಿರ್ಮಾಣ ಮಾಡಿಕೊಂಡಿರುವವರ ವಿರುದ್ಧ ಮತ್ತು ಸಹಕರಿಸಿದ ಮತ್ತು ತಡೆಯಲು ವಿಫಲರಾದ ಅಧಿಕಾರಿಗಳ ವಿರುದ್ದ ಸರ್ಕಾರ ಕ್ರಮ ಕೈಗೊಂಡಿದೆಯೇ; (ವಿವರ ನೀಡುವುದು)

(ಇ) ಸದರಿ ಬಡಾವಣೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸದೇ ಇರುವುದರಿಂದ ಭವಿಷ್ಯದಲ್ಲಿ ಕೊಳಗೇರಿಗಳಾಗಿ ಪರಿವರ್ತನೆಗೊಳ್ಳುವ ಸಂಭವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿ ಕಂದಾಯ ಮತ್ತು ಸರ್ವೆ ಇಲಾಖೆಯಡಿಯಲ್ಲಿ ದಾಖಲಾಗಿರುವ ಸಕಾಲ ಅರ್ಜಿಗಳ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೨೨೧ (೨೫೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯ ಕಂದಾಯ ಮತ್ತು ಸರ್ವೆ ಇಲಾಖೆಯಡಿಯಲ್ಲಿ ಸಕಾಲ ವ್ಯವಸ್ಥೆಯಡಿಯಲ್ಲಿ ದಾಖಲಾದ ಅರ್ಜಿಗಳ ಸಂಖ್ಯೆ ಎಷ್ಟು; (ಇಲಾಖೆವಾರು ವಿವರ ನೀಡುವುದು)

(ಆ) ದಾಖಲಿಸಲ್ಪಟ್ಟ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳು ವಿಲೆಯಾಗಿವೆ; ಮತ್ತು ವಿಲೆ ಮಾಡಲು ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು (ವಿವರ ನೀಡುವುದು)

(ಇ) ನಿಯಮಿತ ಅವಧಿಯೊಳಗೆ ವಿಲೆ ಮಾಡದೆ ಬಾಕಿ ಇರುವ ಅರ್ಜಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

## ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿಯಲ್ಲಿ ವಸತಿ ಯೋಜನೆಗಳ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು)** :–

೨೨೨ (೨೫೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜವಾಹರ್ ಲಾಲ್ ನೆಹರು ನರ್ಮ್ (Jnurm)ಯಡಿಯಲ್ಲಿ ನಗರ ಬಡ ಜನರ ಮೂಲಭೂತ ಸೌಲಭ್ಯ ಯೋಜನೆ (BSUP) ಮತ್ತು ಸಮಗ್ರ ವಸತಿ ಮತ್ತು ಕೊಳಚೆ ಪ್ರದೇಶ ಅಭಿವೃದ್ಧಿ ಯೋಜನೆ (IHSDP) ಹಾಗೂ ರಾಜೀವ್ ಆವಾಸ್ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಎಷ್ಟು ಯೋಜನೆಗಳನ್ನು ಕೈಗೊಂಡು ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ; (ಜಿಲ್ಲಾವಾರು/ ನಗರ ಪ್ರದೇಶಗಳವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ನಗರಗಳನ್ನು ಶೂನ್ಯ ಕೊಳಗೇರಿ ನಗರಗಳನ್ನಾಗಿ (ಕೊಳಗೇರಿ ಮುಕ್ತ ರಾಜ್ಯ ಯೋಜನೆಯಡಿ) ಮಾರ್ಪಾಡು

ಮಾಡುವ ಯೋಜನೆಯ ಪ್ರಗತಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಹೊಸದಾಗಿ ಯಾವುದಾದರೂ ಕೊಳಗೇರಿಗಳನ್ನು ಗುರುತಿಸಿ ಅಧಿಸೂಚನೆ ಹೊರಡಿಸಲಾಗಿದೆಯೇ/ಘೋಷಿಸಲಾಗಿದೆಯೇ; (ವಿವರ ನೀಡುವುದು)

(ಈ) ಕಳೆದ ೫ ವರ್ಷಗಳಲ್ಲಿ ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿಯ ವತಿಯಿಂದ ಕೊಳಗೇರಿಗಳನ್ನು ಅಭಿವೃದ್ಧಿ ಪಡಿಸಲು ಎಷ್ಟು ಯೋಜನೆಗಳಿಗೆ ಸರ್ಕಾರ ಅನುಮೋದಿಸಿದೆ; ಪ್ರಸ್ತುತ ಚಾಲ್ತಿ ಇರುವ ಯೋಜನೆಗಳು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಉ) ಜವಾಹರ್ ಲಾಲ್ ನೆಹರು ನರ್ಮ (Jnurm)ಯಡಿಯಲ್ಲಿ ವಾಸಿಸಲು ಯೋಗ್ಯ ಒಂದು ಮನೆಗಳ (dwelling unit) ಕೇಂದ್ರ ಸರ್ಕಾರದ, ರಾಜ್ಯ ಸರ್ಕಾರ ಹಾಗೂ ಫಲಾನುಭವಿಗಳ ವಂತಿಗೆ/ಪಾಲು/ಕಂತು ಎಷ್ಟು; (ವಿವರ ನೀಡುವುದು)

(ಊ) ಪ್ರಸ್ತುತ ಪ್ರಧಾನಮಂತ್ರಿ ಆವಾಸ್ ಮತ್ತು ಇತರೆ ಯೋಜನೆಯಡಿಯಲ್ಲಿ ವಾಸಿಸಲು ಯೋಗ್ಯವಾದ ಒಂದು ಮನೆಗೆ (dwelling unit) ಕೇಂದ್ರ ಸರ್ಕಾರದ, ರಾಜ್ಯ ಸರ್ಕಾರ ಹಾಗೂ ಫಲಾನುಭವಿಗಳ ವಂತಿಗೆ/ಪಾಲು/ಕಂತು ಎಷ್ಟು (ವಿವರ ನೀಡುವುದು)

## ೨೦೧೯-೨೦ನೇ ಸಾಲಿನಲ್ಲಿ ನಿರ್ಮಾಣವಾದ ಮನೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೨೨೩ (೨೮೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦ನೇ ಸಾಲಿನಲ್ಲಿ ವಸತಿ ಇಲಾಖೆಯ ವಿವಿಧ ಯೋಜನೆಗಳ ಮುಖಾಂತರ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು; ನಿರ್ಮಾಣ ಮಾಡಿರುವ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ವಿವಿಧ ಕೊಳಚೆ ಪ್ರದೇಶಗಳಲ್ಲಿ ಮನೆಗಳನ್ನು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ೨೦೧೯-೨೦ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಕೊಳಚೆ ಪ್ರದೇಶಗಳಿಗೆ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿರುವ ಕೃಷಿ ಇಲಾಖೆಯ ಅನುದಾನ ಹಾಗೂ ಸಿಬ್ಬಂದಿ ವರ್ಗದ ಮಾಹಿತಿ ಕುರಿತು.

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೨೨೪ (೨೮೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರತಿ ಜಿಲ್ಲೆಗಳಿಗೆ ೨೦೧೯-೨೦ನೇ ಸಾಲಿನಲ್ಲಿ ಕೃಷಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು;

(ಆ) ಸದರಿ ಇಲಾಖೆಯಿಂದ ಯಾವ ಯಾವ ಹೊಸ ಯೋಜನೆಗಳನ್ನು ಕೈಗೊಳ್ಳಲಾಗಿದೆ;

(ಇ) ಕೃಷಿ ಇಲಾಖೆಯಲ್ಲಿ ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ರಾಜ್ಯದಲ್ಲಿರುವ ಹೊಸ ತಾಲ್ಲೂಕುಗಳ ಮಾಹಿತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೨೨೫ (೨೮೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೊಸ ತಾಲ್ಲೂಕುಗಳು ರಚನೆಯಾಗಿ ಅಧಿಕೃತವಾಗಿ ಉದ್ಘಾಟನೆಗೊಂಡು ತಾಲ್ಲೂಕು ಕಛೇರಿಗಳು ಪ್ರಾರಂಭವಾಗಿವೆಯೇ; ಮತ್ತು ತಾಲ್ಲೂಕು ಪಂಚಾಯಿತಿ ಪುನರ್ ನಿರ್ಮಾಣವಾಗಿದೆಯೇ; (ವಿವರ ನೀಡುವುದು)

(ಆ) ಹೊಸ ತಾಲ್ಲೂಕಿಗೆ ಇರಬೇಕಾದ ಎಲ್ಲಾ ಇಲಾಖೆಗಳ ಕಛೇರಿಗಳು ತಾಲ್ಲೂಕು ಕೇಂದ್ರಗಳಲ್ಲಿ ಕಾರ್ಯಾರಂಭ ಮಾಡಿದಿಯೇ; ಹಾಗೂ ಈ ತಾಲ್ಲೂಕು ಕಛೇರಿಗಳು ಕಾರ್ಯಾರಂಭವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಹೊಸ ತಾಲ್ಲೂಕಿಗೆ ಮೂಲಸೌಕರ್ಯಗಳನ್ನು ಯಾವಾಗ ಒದಗಿಸಲಾಗುವುದು;

(ಈ) ರಾಜ್ಯದಲ್ಲಿರುವ ಹೊಸ ತಾಲ್ಲೂಕುಗಳಿಗೆ ಇಲ್ಲಿಯವರೆಗೆ ಒದಗಿಸಿರುವ ಅನುದಾನ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ಮದ್ದೂರು–ಕೊಪ್ಪ–ನಾಗಮಂಗಲ–ಬೆಳ್ಳೂರು ಕ್ರಾಸ್ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೬ (೨೦೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಂತ್ತಿರುವ ಮದ್ದೂರು–ಶಿವಪುರದ ಮೂಲಕ ಕೊಪ್ಪ–ನಾಗಮಂಗಲ–ಬೆಳ್ಳೂರು ಕ್ರಾಸ್‌ನಲ್ಲಿ ಬೆಂಗಳೂರು–ತುಮಕೂರು ರಸ್ತೆಗೆ ರಾಷ್ಟ್ರೀಯ ಹೆದ್ದಾರಿಗೆ ಸೇರಿರುವ ಈ ರಸ್ತೆ ಅಭಿವೃದ್ಧಿಗೆ ಸರ್ಕಾರ ಅನುಮೋದನೆ ನೀಡಿದೆಯೇ; (ವಿವರ ನೀಡುವುದು)

(ಆ) ಈ ಸಂಪರ್ಕ ರಸ್ತೆಯು ತುಂಬಾ ಹಾಳಾಗಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಎರಡು ರಾಷ್ಟ್ರೀಯ ಹೆದ್ದಾರಿಗಳಿಗೆ ಸಂಪರ್ಕಗಳನ್ನು ಕಲ್ಪಿಸುವ ಈ ರಸ್ತೆಯನ್ನು ಅಗಲೀಕರಿಸಿ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವಸತಿ ಯೋಜನೆಯ ಫಲಾನುಭವಿಗಳಿಗೆ ಅನುದಾನ ಬಿಡುಗಡೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೭ (೨೭೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು; (ಯೋಜನಾವಾರು, ಫಲಾನುಭವಿಗಳ ಹೆಸರುವಾರು ವಿವರ ನೀಡುವುದು)

(ಆ) ಇದರಲ್ಲಿ ಪೂರ್ಣಗೊಂಡ ಮನೆಗಳೆಷ್ಟು; ಅಪೂರ್ಣಗೊಂಡ ಮನೆಗಳೆಷ್ಟು; (ವಿವರ ನೀಡುವುದು)

(ಇ) ಕಾಮಗಾರಿ ಪೂರ್ಣಗೊಂಡಿದ್ದರೂ ಕಳೆದ ೮ (ಎಂಟು) ತಿಂಗಳಿಂದ ಫಲಾನುಭವಿಗಳಿಗೆ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಶೀಘ್ರವಾಗಿ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## K.H.B. ವಸತಿ ಬಡಾವಣೆಗಳ ಹಸ್ತಾಂತರದ ಬಗ್ಗೆ.

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೨೨೮ (೨೧೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಗೃಹ ಮಂಡಳಿವತಿಯಿಂದ ಮಂಡ್ಯ ಕೆರೆ ಅಂಗಳದಲ್ಲಿ ಮಂಡ್ಯ ಗ್ರಾಮದ ಸರ್ವೆ ನಂ. ೫೦೭ರಲ್ಲಿ ವಸತಿ ಬಡಾವಣೆಯನ್ನು ಅಭಿವೃದ್ಧಿ ಪಡಿಸಲಾಗಿದ್ದು ಯಾವಾಗ;

(ಆ) ಸದರಿ ಬಡಾವಣೆಯನ್ನು ಮಂಡ್ಯ ನಗರ ಸಭೆಗೆ ಹಸ್ತಾಂತರ ಮಾಡಲಾಗಿದೆಯೇ; (ವಿವರ ಒದಗಿಸುವುದು)

(ಇ) ಮಂಡ್ಯ ನಗರ ಸಭೆ ಈ ಬಡಾವಣೆಗೆ ಸಂಬಂಧಿಸಿದಂತೆ K.H.B. ರವರಿಂದ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಬರಬೇಕಾದ ರೂ.೭೭ಲಕ್ಷ ಶುಲ್ಕ ಬಂದ ನಂತರ ಹಸ್ತಾಂತರ ಮಾಡಿಕೊಳ್ಳುವುದಾಗಿ ತಿಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಈ ಶುಲ್ಕವನ್ನು K.H.B. ಯಿಂದ ಪಾವತಿಸಿ ನಗರಸಭೆಗೆ ಹಸ್ತಾಂತರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಏಕವ್ಯಕ್ತಿ ದುರಸ್ತು ಪ್ರಕ್ರಿಯೆ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೨೨೯ (೨೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಂದಾಯ ಇಲಾಖೆಯಿಂದ ರೈತರಿಗೆ ಮಂಜೂರಾದ ಜಮೀನುಗಳನ್ನು ದುರಸ್ತು ಮಾಡುವ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಏಕವ್ಯಕ್ತಿ ದುರಸ್ತು ಮಾಡಲು ಅರ್ಜಿ ಪಡೆದು ಮೂರ್ನಾಲ್ಕು ವರ್ಷಗಳಾದರೂ ೧ ರಿಂದ ೫, ೬ರಿಂದ ೧೧ ಹಾಗೂ ೧೧ ಇ ಪ್ರಕ್ರಿಯೆಗಳು ಪೂರ್ಣವಾಗದೆ ರೈತರು ಕಂಗಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಂತಹ ಪ್ರಕರಣಗಳಲ್ಲಿ ತ್ವರಿತವಾಗಿ ಏಕವ್ಯಕ್ತಿ ದುರಸ್ತು ಕಾರ್ಯ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಭಾಗಮಂಡಲದ ತಲಕಾವೇರಿ ಅಭಿವೃದ್ಧಿ ಕಾರ್ಯಗಳ ಬಗ್ಗೆ.

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೦ (೨೧೭) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಕೊಡಗು ಜಿಲ್ಲೆ ಭಾಗಮಂಡಲದ ತಲಕಾವೇರಿಗೆ ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿ ಕಾರ್ಯಗಳಿಗಾಗಿ ಬಿಡುಗಡೆ ಮಾಡಿದ ಅನುದಾನವೆಷ್ಟು; ಆ ಪೈಕಿ ಖರ್ಚಾದ ಹಣವೆಷ್ಟು; (ಕಾಮಗಾರಿವಾರು ಮಾಹಿತಿ ನೀಡುವುದು)

(ಆ) ತಲಕಾವೇರಿ ದೇವಾಲಯದ ಅಭಿವೃದ್ಧಿಗೆ ಸರ್ಕಾರದಿಂದ ಯಾವುದಾದರೂ ಹೊಸ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆಯೇ ? ಹಾಗಿದ್ದಲ್ಲಿ, (ವಿವರಗಳನ್ನು ನೀಡುವುದು)

## ಗುಡ್ಡ ಕುಸಿತದ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೧ (೨೧೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ ಮಡಿಕೇರಿಯಲ್ಲಿರುವ ಜಿಲ್ಲಾಧಿಕಾರಿಗಳ ಕಛೇರಿ ಪಕ್ಕದಲ್ಲಿನ ಬರೆ/ಗುಡ್ಡವು ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಪರಿಹಾರ ಕ್ರಮಗಳೇನು ; (ವಿವರ ನೀಡುವುದು)

(ಆ) ಇಲ್ಲಿನ ಪ್ರದೇಶವನ್ನು ಸರಿಪಡಿಸಲು ಬಿಡುಗಡೆಯಾದ ಮತ್ತು ಖರ್ಚಾದ ಅನುದಾನ ಎಷ್ಟು; (ವಿವರ ಒದಗಿಸುವುದು)

(ಇ) ಮುಂದಿನ ದಿನಗಳಲ್ಲಿ ಗುಡ್ಡ ಕುಸಿತ ಪ್ರಕರಣಗಳನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ? (ವಿವರ ಒದಗಿಸುವುದು)

## ಮಾಜಿ ಸೈನಿಕರಿಗೆ ಕೃಷಿ ಭೂಮಿ ಒದಗಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೨ (೧೯೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ಹತ್ತು ವರ್ಷಗಳಿಂದ ಎಷ್ಟು ಮಾಜಿ ಸೈನಿಕರಿಗೆ ಮಾಜಿ ಸೈನಿಕ ಕೋಟಾದಡಿಯಲ್ಲಿ ಭೂ ಮಂಜೂರಾತಿಯನ್ನು ನೀಡಲಾಗಿದೆ; (ಹೆಸರಿನೊಂದಿಗೆ ಪೂರ್ಣ ವಿವರಗಳನ್ನು ನೀಡುವುದು)

(ಆ) ಮಾಜಿ ಸೈನಿಕರ ಕೋಟಾದಡಿಯಲ್ಲಿ ಭೂ ಮಂಜೂರಾತಿಗಾಗಿ ಕಳೆದ ಹತ್ತು ವರ್ಷಗಳಿಂದ ಇಲ್ಲಿಯವರೆಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇದರಲ್ಲಿ ವಿಲೇವಾರಿಯಾದ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಭೂಮಿ ಇಲ್ಲದ ಮಾಜಿ ಸೈನಿಕರಿಗೆ ಕೃಷಿ ಭೂಮಿಯನ್ನು ಹಂಚಿಕೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಮಳೆಹಾನಿಯಿಂದ ರಸ್ತೆ ಮತ್ತು ಕಟ್ಟಡಗಳ ಹಾನಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೩ (೧೯೯) ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಮಳೆ ಹಾನಿಯಿಂದ ಉಂಟಾದ ನಷ್ಟ ಸರಿಪಡಿಸಲು ರಸ್ತೆಗಳ ನಿರ್ಮಾಣ/ ದುರಸ್ಥಿ, ಕಟ್ಟಡಗಳ ನಿರ್ಮಾಣ/ದುರಸ್ಥಿ ಕಾಮಗಾರಿಗಳಿಗೆ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನದ ಮೊತ್ತ ಎಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಇಲ್ಲಿಯವರೆಗೆ ವೆಚ್ಚ ಮಾಡಲಾದ ಅನುದಾನವೆಷ್ಟು ? (ಕಾಮಗಾರಿವಾರು, ವರ್ಷಾವಾರು ವಿವರ ನೀಡುವುದು)

## ಅತಿವೃಷ್ಟಿ, ಅನಾವೃಷ್ಟಿಯಿಂದ ಭಾದಿತವಾಗಿರುವ ಗ್ರಾಮಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೩೪ (೪೬೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಅತಿವೃಷ್ಟಿ, ಅನಾವೃಷ್ಟಿಯಿಂದ ಭಾದಿತವಾಗಿರುವ ಗ್ರಾಮಗಳೆಷ್ಟು;

(ಆ) ಕಲಬುರಗಿ ಜಿಲ್ಲೆಯಲ್ಲಿ ಅತಿವೃಷ್ಟಿ, ಅನಾವೃಷ್ಟಿಯಿಂದ ಎಷ್ಟು ಪ್ರಾಣ ಹಾನಿ, ಜಾನುವಾರುಗಳ ಹಾನಿ, ಆಸ್ತಿ-ಪಾಸ್ತಿಗಳು, ಬೆಳೆ ಹಾನಿಗಳು ಮತ್ತು ಮನೆಗಳು ನಷ್ಟ ಆಗಿರುತ್ತವೆ;

(ಇ) ಇಲ್ಲಿಯವರೆಗೆ ನೀಡಿದ ಪರಿಹಾರವೆಷ್ಟು ಮತ್ತು ಪರಿಹಾರ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಪರಿಹಾರ ನೀಡಲು ಅನುಸರಿಸುವ ಮಾನದಂಡಗಳೇನು ?

## ೧೧ಇ ಅರ್ಜಿಗಳ ವಿಲೇವಾರಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು):-**

೨೩೫ (೪೬೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೦೨ ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ೧೧ಇ ಸ್ಕೇಚ್‌ಗೆ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; ಅದರಲ್ಲಿ ವಿಲೇವಾರಿ ಮಾಡಲಾದ ಅರ್ಜಿಗಳ ಸಂಖ್ಯೆ ಎಷ್ಟು;

(ಆ) ೧೧ಇ ಸ್ಕೇಚ್‌ಗೆ ಸ್ವೀಕೃತವಾದ ಅರ್ಜಿ ವಿಲೇವಾರಿ ಮಾಡಲು ನಿಗಧಿಪಡಿಸಿದ ಅವಧಿ ಎಷ್ಟು;

(ಇ) ೧೧ಇ ಸ್ಕೇಚ್ ಮಾಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಭೂ ಸುಧಾರಣಾ ಕಾಯ್ದೆಯಡಿ ಸ್ವೀಕರಿಸಿದ ಅರ್ಜಿಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೩೬ (೪೬೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಕರ್ನಾಟಕ ಭೂ ಸುಧಾರಣೆ ಕಾಯ್ದೆಯಡಿ ಕಲಂ ೧೧೯ ರಡಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳಲ್ಲಿ ಮಂಜೂರಾದ ಮತ್ತು ತಿರಸ್ಕರಿಸಿದ ಅರ್ಜಿಗಳ ಸಂಖ್ಯೆ ಎಷ್ಟು;

(ಇ) ಕರ್ನಾಟಕ ಭೂ ಸುಧಾರಣೆ ಕಾಯ್ದೆಯಡಿ ಕಲಂ ೧೧೯ ರಡಿ ಸ್ವೀಕೃತವಾದ ಅರ್ಜಿಗಳನ್ನು ವಿಲೇವಾರಿ ಮಾಡಲು ಅನುಸರಿಸುವ ಮಾನದಂಡಗಳೇನು ?

## ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಜಮೀನುಗಳ ಪೋಡಿ ಮಾಡದಿರುವ ಕುರಿತು

**ಶ್ರೀ ತಿಪ್ಪೇಸ್ವಾಮಿ ಕೆ.ಎ. (ನಾಮನಿರ್ದೇಶನ ಹೊಂದಿದವರು):–**

೨೩೭ (೨೮೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಮತ್ತು ದರ್ಖಾಸ್ತು ಮಂಜೂರಾದ ಅಂಶಿಕ ಜಮೀನಗಳ ಖಾತೆದಾರರ ಪೋಡಿ ಮಾಡದೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವುದು ಸಾಧ್ಯವಾಗದಿರುವ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸದಿರಲು ಕಾರಣಗಳೇನು;

(ಆ) ಜನ ಸಾಮಾನ್ಯರಿಗೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ನೆರವಾಗಲು, ಪೋಡಿಮುಕ್ತ ಅಭಿಯಾನವನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಅಭಿಯಾನದಂತೆ ತುಮಕೂರು ಜಿಲ್ಲೆಯಲ್ಲಿ ಭೂಮಾಪನಾ ಕಾರ್ಯ ಪೂರ್ಣಗೊಂಡ ಗ್ರಾಮಗಳು ಯಾವುವು; (ವಿವರಗಳನ್ನು ನೀಡುವುದು)

(ಇ) ಶಿರಾ ತಾಲ್ಲೂಕಿನಲ್ಲಿ ಭೂಮಾಪನಾ ಕಾರ್ಯ ಪೂರ್ಣಗೊಂಡ ಗ್ರಾಮಗಳಲ್ಲಿ ಖಾತೆದಾರರಿಗೆ ಪಹಣಿ ದಾಖಲಿಸಿ, ಪಹಣಿ ಪತ್ರ ನೀಡುವ ಕಾರ್ಯವನ್ನು ಪೂರ್ಣಗೊಳಿಸಲಾಗಿದೆಯೇ ? (ವಿವರಗಳನ್ನು ನೀಡುವುದು)

## ಸಣ್ಣ, ಬಂದರು ಮತ್ತು ಒಳನಾಡು ಸಾರಿಗೆ ಮತ್ತು ಕಡಲ ತೀರಗಳ ಅಭಿವೃದ್ಧಿ ಬಗ್ಗೆ

**ಶ್ರೀ ತಿಪ್ಪೇಸ್ವಾಮಿ ಕೆ.ಎ. (ನಾಮನಿರ್ದೇಶನ ಹೊಂದಿದವರು):–**

೨೩೮ (೩೦೫) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ಬಂದರು, ಒಳನಾಡು ಸಾರಿಗೆ ಮತ್ತು ಕಡಲ ತೀರಗಳ ಅಭಿವೃದ್ಧಿ ಬೆಳವಣಿಗೆಗೆ The Karnataka Maritime Board ನ್ನು ಸ್ಥಾಪಿಸಲಾಗಿದೆಯೇ; ಹಾಗೂ ಈ ಬೋರ್ಡ್‌ಗೆ ಪದಾಧಿಕಾರಿಗಳನ್ನು ನೇಮಿಸಲಾಗಿದೆಯೇ; ನೇಮಿಸಿದ್ದಲ್ಲಿ (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ಬೃಹತ್ ಮತ್ತು ಸಣ್ಣ ಬಂದರುಗಳೆಷ್ಟು; ಈ ಬಂದುರಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರ ಯಾವುದಾದರೂ

ಅಭಿವೃದ್ಧಿ ಯೋಜನೆಗಳನ್ನು ರೂಪಿಸಿದೆಯೇ ; ರೂಪಿಸಿದ್ದಲ್ಲಿ ಈ ಯೋಜನೆಯನ್ನು ಯಾವ ಸಂಸ್ಥೆಯಿಂದ ನಿರ್ವಹಿಸಲಾಗಿದೆ; ಈ ಯೋಜನಾ ವರದಿಯ ಸಂಕ್ಷಿಪ್ತ ವಿವರ ನೀಡುವುದು ;

(ಇ) ಕೇಂದ್ರ ಸರ್ಕಾರದ 'ಸಾಗರ ಮಾಲಾ ಯೋಜನೆ' ಯಡಿ ಯಾವ ಯಾವ ಬಂದರುಗಳನ್ನು ಮತ್ತು ಕಡಲ ತೀರಗಳನ್ನು ಅಭಿವೃದ್ಧಿಪಡಿಸಲಾಗುತ್ತದೆ ? (ವಿವರ ನೀಡುವುದು)

## ಕೃಷಿಯಲ್ಲಿ ವಿವಿಧ ಗೊಬ್ಬರಗಳ ಬಳಕೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–**

೨೩೯ (೨೯೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಕೃಷಿಯಲ್ಲಿ ನಾಡೆಪ್ (NADEP) ಕಾಂಪೋಸ್ಟಿಂಗ್, ವರ್ಮಿ ಕಾಂಪೋಸ್ಟಿಂಗ್, ದ್ರವ ಜೈವಿಕ ಗೊಬ್ಬರವನ್ನು ಬಳಸುವ ಮೂಲಕ ಕೃಷಿ ವೆಚ್ಚವನ್ನು ಕಡಿತಗೊಳಿಸುವ ಬಗ್ಗೆ ಯಾವುದಾದರೂ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆಯೇ; ಹಾಗಿದ್ದಲ್ಲಿ, ಅದರ ವಿವರಗಳನ್ನು ಒದಗಿಸುವುದು;

(ಆ) ಈ ಗೊಬ್ಬರವನ್ನು ಬಳಸುವುದರ ಮೂಲಕ ಕೃಷಿ ಭೂಮಿ ಹೆಚ್ಚು ಫಲವತ್ತಾಗುತ್ತದೆ ಮತ್ತು ಹೆಚ್ಚಿನ ಇಳುವರಿಯನ್ನು ನೀಡುತ್ತದೆ ಎಂಬುದು ನಿಜವೇ; ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಿಂದ ಇಂದಿನವರೆಗೆ ಪ್ರತಿ ಹೆಕ್ಟೇರ್‌ಗೆ ಬೆಳೆದ ಬೆಳೆಗಳ ಸ್ಥಿತಿಯೇನು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಹೆಚ್ಚಿನ ಇಳುವರಿ ಪಡೆಯುತ್ತಿರುವ ರೈತರಿಗೆ ಪ್ರೋತ್ಸಾಹ ಧನ ನೀಡುವ ಮೂಲಕ ಸರ್ಕಾರ ರೈತರನ್ನು ಸನ್ಮಾನಿಸಿದೆಯೇ ? (ಜಿಲ್ಲಾವಾರು ಸನ್ಮಾನಿಸಲ್ಪಟ್ಟ ರೈತರ ಸಂಖ್ಯೆ, ಹೆಸರು ನೀಡುವುದು)

## ಪ್ರಧಾನ್ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಅಡಿಯಲ್ಲಿ ವಸತಿ ನಿರ್ಮಾಣ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು):–**

೨೪೦ (೨೮೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಧಾನ್ ಮಂತ್ರಿ ಆವಾಸ್ ಯೋಜನೆ (ಪಿಎಂಎವೈ) ಯಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ನಿರ್ಮಿಸಲಾಗುತ್ತಿರುವ ಪ್ರತಿ ವಸತಿ ಘಟಕ ನಿರ್ಮಾಣದ ವೆಚ್ಚವೆಷ್ಟು;

(ಆ) ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ನಿರ್ಮಾಣದ ವೆಚ್ಚವು ವಿಭಿನ್ನವಾಗಿದೆಯೇ; ಹಾಗಿದ್ದಲ್ಲಿ, ಎರಡೂ ಪ್ರದೇಶಗಳಿಗೆ ಹಂಚಿಕೆಯನ್ನು ಸಮನಾಗಿಸಲು ಯಾವುದೇ ಯೋಜನೆಯನ್ನು ರೂಪಿಸಲಾಗಿದೆಯೇ;

(ಇ) ಉಭಯ ಪ್ರದೇಶಗಳ ನಿರ್ಮಾಣ ಸಾಮಾಗ್ರಿಗಳನ್ನು ಒಂದೇ ಸ್ಥಳದಿಂದ ತರುವುದರಿಂದ ಎರಡೂ ಪ್ರದೇಶಗಳ ಯೋಜಿತ ವೆಚ್ಚವನ್ನು ಅದೇ ನಿಯತಾಂಕಗಳಲ್ಲಿ ಅಳೆಯುವುದು ಸಾಧುವಾಗಿದ್ದು, ಈ ಬಗ್ಗೆ ಸರ್ಕಾರ ಪರಶೀಲಿಸುವುದೇ ? (ವಿವರ ಒದಗಿಸುವುದು)

## ನೆರೆ ಹಾವಳಿಯಿಂದ ಸಂಭವಿಸಿದ ಅನಾಹುತಗಳ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೪೧ (೨೭೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೆರೆ ಹಾವಳಿಯಿಂದ ಸಂಭವಿಸಿದ ಅನಾಹುತಗಳು ಯಾವುವು; ಯಾವ ಯಾವ ಅನಾಹುತಗಳಿಗೆ ಎಷ್ಟು ಪರಿಹಾರವನ್ನು ಒದಗಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನೆರೆ ಪರಿಹಾರಕ್ಕಾಗಿ ಕೇಂದ್ರ ಸರ್ಕಾರ ಒದಗಿಸಿದ ಅನುದಾನದ ಮೊತ್ತವೆಷ್ಟು; ಪರಿಹಾರ ರೂಪದಲ್ಲಿ ಹಂಚಿಕೆ ಮಾಡಲಾದ ಅನುದಾನ ಎಷ್ಟು ?

## ಕೊಡಗು ಜಿಲ್ಲೆಯ ನಾಪಂಡ ಕಾಡು ಬಳಿ ಸೇತುವೆ ನಿರ್ಮಾಣ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೪೨ (೨೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಅವಂಡಿ ಗ್ರಾಮದ ನಾಪಂಡ ಕಾಡು ಎಂಬಲ್ಲಿ, ಮುಕ್ಕೋಡ್ಲು ಹೊಳೆಗೆ ಸೇತುವೆ ನಿರ್ಮಾಣವಾಗದಿರುವುದರಿಂದ, ಪ್ರಕೃತಿ ವಿಕೋಪ ಹಾಗೂ ಪ್ರವಾಹದ ಸಂದರ್ಭದಲ್ಲಿ ಆ ಭಾಗದ ಜನರ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಸೇತುವೆ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಯಾವ ಕಾಲಮಿತಿಯೊಳಗೆ, ಸದರಿ ಸೇತುವೆಯನ್ನು ನಿರ್ಮಾಣ ಮಾಡಲಾಗುವುದು ?

## ಕೊಡಗು ಜಿಲ್ಲೆಯ ಮುಜರಾಯಿ ದೇವಸ್ಥಾನಗಳಿಗೆ ಅನುದಾನ ನೀಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೩ (೨೯೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಡುವ ದೇವಸ್ಥಾನಗಳು ಯಾವುವು;

(ಆ) ಜಿಲ್ಲೆಯಲ್ಲಿ, ಕಳೆದ ಮೂರು ವರ್ಷಗಳಲ್ಲಿ ಸತತವಾಗಿ ಸಂಭವಿಸಿದ ಪ್ರಕೃತಿ ವಿಕೋಪದಿಂದಾಗಿ ಸದರಿ ದೇವಸ್ಥಾನಗಳಲ್ಲಿ ಹಾಳಾಗಿರುವ ಮೂಲ ಸೌಕರ್ಯಗಳನ್ನು ಪುನರ್‌ಕಲ್ಪಿಸಲು ಮಂಜೂರು ಮಾಡಲಾದ ಅನುದಾನ ಎಷ್ಟು;

(ಇ) ಮೂಲ ಸೌಕರ್ಯಗಳನ್ನು ಕಲ್ಪಿಸುವ ಸಲುವಾಗಿ ಇದುವರೆಗೂ ಅನುದಾನ ದೊರೆಯದ ದೇವಸ್ಥಾನಗಳಿಗೆ, ಪ್ರಸಕ್ತ ಆರ್ಥಿಕ ವರ್ಷದಲ್ಲಿಯಾದರೂ ವಿಶೇಷ ಅನುದಾನವನ್ನು ನೀಡಲಾಗುವುದೇ ?

## ಕೊಡಗು ಜಿಲ್ಲೆಯಲ್ಲಿ ಕೋವಿ ಹಕ್ಕಿನ ಪರವಾನಗಿ ನವೀಕರಣದಲ್ಲಿ ವಿಳಂಬ ಆಗಿರುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೪ (೨೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕೋವಿ ಹಕ್ಕಿನ ಪರವಾನಗಿ ನವೀಕರಣ ಹಾಗೂ ಹೊಸದಾಗಿ ಕೋವಿ ಖರೀದಿ ಸಂದರ್ಭಗಳಲ್ಲಿ ನಿಯಮಗಳನ್ನು ಸರಳೀಕರಣಗೊಳಿಸದಿರುವುದರಿಂದ ಸಾಕಷ್ಟು ವಿಳಂಬ ಉಂಟಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿಯ ಅನಗತ್ಯ ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೊಡಗು ಜಿಲ್ಲೆಯಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿ ಮಂಜೂರು ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೫ (೨೯೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಎಷ್ಟು ಗಿರಿಜನ ಫಲಾನುಭವಿಗಳಿಗೆ ಭೂಮಿಯನ್ನು ಮಂಜೂರು ಮಾಡಲಾಗಿದೆ;

ಆ) ಜಿಲ್ಲೆಯಲ್ಲಿ ಇದುವರೆಗೂ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿಯನ್ನು ಮಂಜೂರು ಮಾಡುವಂತೆ ಕೋರಿ ಬಂದಿರುವ ಅರ್ಜಿಗಳು ಎಷ್ಟು;

(ಇ) ಸದರಿ ಅರ್ಜಿಗಳಲ್ಲಿ ಇದುವರೆಗೂ ವಿಲೇವಾರಿಯಾಗದೆ ಉಳಿದಿರುವ ಅರ್ಜಿಗಳೆಷ್ಟು;

(ಈ) ಜಿಲ್ಲೆಗಳಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿ ಹಂಚಿಕೆ ಮಾಡುವಲ್ಲಿ ಅನಗತ್ಯ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ?

## ಬೀದರ್ ಜಿಲ್ಲೆಯಲ್ಲಿ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೬ (೭೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಔರಾದ್-ಬೀದರ್ ರಾಜ್ಯ ಹೆದ್ದಾರಿ ರಸ್ತೆ ಸಂಪೂರ್ಣ ಹಾಳಾಗಿದ್ದು, ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಕಳೆದ ೨೦೧೩ ರಿಂದ ಇಲ್ಲಿಯವರೆಗೆ ಔರಾದ್-ಬೀದರ್ ರಸ್ತೆಗಾಗಿ ಖರ್ಚು ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಔರಾದ್-ಬೀದರ್ ರಾಜ್ಯ ಹೆದ್ದಾರಿ ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿದ್ದು, ರಸ್ತೆ ನಿರ್ಮಾಣವಾಗಲು ಇನ್ನು ಎಷ್ಟು ಕಾಲಾವಧಿ ಬೇಕಾಗುವುದು ; (ಮಾಹಿತಿ ನೀಡುವುದು)

(ಈ) ಅತಿವೃಷ್ಟಿಯಿಂದ ಹಾಳಾದ ಬ್ರಿಡ್ಜ್‌ಗಳ ದುರಸ್ಥಿಗೆ ಖರ್ಚು ಮಾಡಿದ ಅನುದಾನವೆಷ್ಟು; ಕಾಮಗಾರಿಗಳು ಕಳಪೆ ಮಟ್ಟದಲ್ಲಿ ನಡೆದಿದೆ ಎಂಬ ದೂರುಗಳು ಬಂದಿವೆಯೇ; ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಲಾಕ್‌ಡೌನ್ ಅವಧಿಯಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ರೈತ ಕುಟುಂಬಕ್ಕೆ ಪರಿಹಾರ ನೀಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೨೪೭ (೨೮೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ೨೦೧೯-೨೦೨೦ ಮತ್ತು ೨೦೨೦-೨೦೨೧ನೇ ಸಾಲಿನಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಲಾಕ್‌ಡೌನ್ ಸಮಯದಲ್ಲಿ ಆತ್ಮಹತ್ಯೆ ಮಾಡಿಕೊಂಡ ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನ ನಾಗನಪಲ್ಲಿ ಗ್ರಾಮದ ರೈತ ಕುಟುಂಬಕ್ಕೆ ಇನ್ನೂ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ?

## ಬ್ರಾಹ್ಮಣ ಸಮುದಾಯದ ಹಿಂದುಳಿದವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಕಾಲಾವಧಿಯ ಬಗ್ಗೆ

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):-**

೨೪೮ (೧೯೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ ಯಾವ ದಿನಾಂಕದಿಂದ ನೀಡಲಾಗುತ್ತದೆ;

(ಆ) ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಯಾವ ಮಾನದಂಡದ ಆಧಾರದ ಮೇಲೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಕನಿಷ್ಠ ಕಾಲಮಿತಿ ನಿಗದಿಗೊಳಿಸಲಾಗಿದೆ; ಹಾಗೂ ಇತರೆ ಸಮುದಾಯದವರಿಗೆ ಯಾವ ಮಾನದಂಡಗಳ ಆಧಾರದ ಮೇಲೆ ಗರಿಷ್ಠ ಕಾಲಮಿತಿ ನಿಗಧಿಗೊಳಿಸಲಾಗಿದೆ; (ವಿವರ ನೀಡುವುದು)

(ಇ) ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೂ ಜೀವಿತಾವಧಿಯವರೆಗೆ ಜಾತಿ ಪ್ರಮಾಣ ಪತ್ರ ಮತ್ತು ಕನಿಷ್ಟ ೫ ವರ್ಷಗಳವರೆಗೆ ಆದಾಯ ಪ್ರಮಾಣಪತ್ರಗಳನ್ನು ನೀಡುವ ಪ್ರಸ್ತಾವವು ಸರ್ಕಾರದ ಮುಂದಿದೆಯೇ? (ವಿವರ ನೀಡುವುದು)

## ಪ್ರವಾಹ ಸಂತ್ರಸ್ತರಿಗೆ ಪರಿಹಾರ ವಿತರಣೆ ಬಗ್ಗೆ.

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು):-**

೨೪೯ (೨೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೨೦೨೦ರ ಮುಂಗಾರು ಅವಧಿಯ ಪ್ರವಾಹ ಸಂತ್ರಸ್ತರಿಗೆ ಸರ್ಕಾರದ ವತಿಯಿಂದ ಪರಿಹಾರ ಧನ ವಿತರಿಸಲಾಗಿದೆಯೇ;

(ಆ) ಪ್ರವಾಹದಿಂದ ಆಗಿರುವ ಒಟ್ಟು ನಷ್ಟ ವಿತರಿಸಿದ ಪರಿಹಾರದ ಮೊತ್ತ ಹಾಗೂ ಪರಿಹಾರ ಪಡೆದ ಸಂತ್ರಸ್ತರ ಸಂಖ್ಯೆ ಎಷ್ಟು? (ವಿವರಗಳನ್ನು ನೀಡುವುದು)

## ಖಾಸಗಿ ಮಾಲೀಕತ್ವದ ಜಾಗಗಳಲ್ಲಿರುವ ಕೊಳಗೇರಿಗಳ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೨೫೦ (೨೫೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ ಖಾಸಗಿ ಮಾಲೀಕತ್ವದ ಜಾಗಗಳಲ್ಲಿರುವ ಕೊಳಗೇರಿ ಪ್ರದೇಶಗಳ ಸಂಖ್ಯೆ ಎಷ್ಟು;

(ಆ) ಸದರಿ ಜಿಲ್ಲೆಗಳಲ್ಲಿ ಖಾಸಗಿ ಮಾಲೀಕತ್ವದ ಜಾಗಗಳಲ್ಲಿ ವಾಸಿಸುತ್ತಿರುವ ಒಟ್ಟು ಕೊಳಚೆ ಪ್ರದೇಶಗಳ ನಿವಾಸಿ ಕುಟುಂಬಗಳು ಹಾಗೂ ಜನ ಸಂಖ್ಯೆ ಎಷ್ಟು;

(ಇ) ಸದರಿ ಜಿಲ್ಲೆಗಳಲ್ಲಿ ಖಾಸಗಿ ಮಾಲೀಕತ್ವದ ಜಾಗಗಳನ್ನು ಕೊಳಗೇರಿ ಪ್ರದೇಶ ಅಭಿವೃದ್ಧಿ ಮಂಡಳಿಯ ವಶಕ್ಕೆ ಪಡೆದುಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ ಖಾಸಗಿ ಮಾಲೀಕತ್ವದ ಜಾಗಗಳನ್ನು ಕೊಳಗೇರಿ ಪ್ರದೇಶ ಅಭಿವೃದ್ಧಿ ಮಂಡಳಿಯ ವಶಕ್ಕೆ ಪಡೆದುಕೊಂಡು ಸದರಿ ಜಾಗಗಳಲ್ಲಿ ವಾಸವಿರುವ ನಿವಾಸಿಗಳಿಗೆ ಕ್ರಯಪತ್ರ/ಹಕ್ಕುಪತ್ರ ನೀಡಲು ಸರ್ಕಾರ ಮುಂದಾಗುವುದೇ; ಹಾಗಿದ್ದಲ್ಲಿ, ಇದಕ್ಕೆ ಬೇಕಾಗುವ ಕಾಲಾವಕಾಶವೆಷ್ಟು ?

## ರೈತರಿಗೆ ಬೆಳೆ ವಿಮೆ ಪಾವತಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೧ (೨೫೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ನೇ ಸಾಲಿನಲ್ಲಿ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ರೈತರಿಗೆ ಬೆಳೆ ವಿಮೆಯನ್ನು ಪಾವತಿಸಲಾಗಿದೆ; ಪಾವತಿಸಲಾದ ಒಟ್ಟು ಮೊತ್ತವೆಷ್ಟು;

(ಆ) ಈ ಜಿಲ್ಲೆಗಳಲ್ಲಿ ೨೦೧೯ನೇ ಸಾಲಿನಲ್ಲಿ ಎಷ್ಟು ರೈತರಿಗೆ ಬೆಳೆ ವಿಮೆಯನ್ನು ಪಾವತಿಸಲಾಗಿದೆ ಹಾಗೂ ಪಾವತಿಸಲಾದ ಒಟ್ಟು ಮೊತ್ತವೆಷ್ಟು;

(ಇ) ವಿಮೆ ಕಂಪನಿಗಳು ರೈತರಿಗೆ ಬೆಳೆ ವಿಮೆ ಪಾವತಿಸುವಲ್ಲಿ ಆಗಿರುವ ವಿಳಂಬಕ್ಕೆ ಕಾರಣಗಳೇನು ಹಾಗೂ ರೈತರಿಗೆ ವಿಮೆ ಕಂಪನಿಗಳು ಪಾವತಿಸಬೇಕಾದ ಬೆಳೆ ವಿಮೆ ಪಾವತಿಸುವಂತೆ, ಸರ್ಕಾರ ವಿಮೆ ಕಂಪನಿಗಳಿಗೆ ನಿರ್ದೇಶನ ನೀಡುವುದೇ; ಇದಕ್ಕೆ ಬೇಕಾದ ಕಾಲಾವಕಾಶವೆಷ್ಟು ?

## ಹುಡ್ಕೋದಿಂದ ಪಡೆದ ಸಾಲ ಮನ್ನಾ ಮಾಡುವ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೫೨ (೨೦೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಹುಡ್ಕೋದಿಂದ ಸಾಲ ಪಡೆದು ವಸತಿ ರಹಿತರಿಗೆ ವಸತಿ ನೀಡಿದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ವರ್ಷಾವಾರು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು)

(ಆ) ಸರ್ಕಾರದ ಸಾಲ ಮತ್ತು ಬಡ್ಡಿ ಮನ್ನಾ ಯೋಜನೆಯಡಿ ಈ ಮನೆಗಳ ಮೇಲಿನ ಸಾಲ ಮತ್ತು ಬಡ್ಡಿ ಮನ್ನಾ ಮಾಡಲಾಗಿದೆಯೇ ? (ವಿವರ ನೀಡುವುದು)

## ಯಾದಗಿರಿ ಜಿಲ್ಲೆಯಲ್ಲಿ ಭತ್ತದ ಬೆಳೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೩ (೨೯೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆಯಲ್ಲಿ ಈ ಬಾರಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಭತ್ತ ಬೆಳೆಯಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದ್ಯ ಮಾರುಕಟ್ಟೆಯಲ್ಲಿರುವ ಭತ್ತದ ದರ ಎಷ್ಟು; ಕೇಂದ್ರ ಸರ್ಕಾರ ನಿಗದಿಪಡಿಸಿದ ಕನಿಷ್ಠ ಬೆಂಬಲ ಬೆಲೆ ಎಷ್ಟು; (ವಿವರ ನೀಡುವುದು)

(ಇ) ಭತ್ತ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿದೆಯೇ; ನಿರ್ಧರಿಸಿದ್ದಲ್ಲಿ, ಎಷ್ಟು ಕೇಂದ್ರಗಳನ್ನು ತೆರೆಯಲಾಗುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಪ್ರತಿ ರೈತರಿಂದ ಎಷ್ಟು ಕ್ವಿಂಟಾಲ್ ಭತ್ತ ಖರೀದಿಸಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮಳೆಯಿಂದ ಹಾನಿಯಾದ ಬೆಳೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೪ (೩೦೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬರುಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇತ್ತೀಚಿಗೆ ಸುರಿದ ಮಳೆ ಹಾಗೂ ಪ್ರವಾಹದಿಂದ ಎಷ್ಟು ಪ್ರದೇಶಗಳಲ್ಲಿ ಬೆಳೆ ಹಾನಿಯಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೆಳೆ ಹಾನಿ ಪ್ರಮಾಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಹಂಗಾಮಿನಲ್ಲಿ ಎರಡೂ ಜಿಲ್ಲೆಗಳಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ತೊಗರಿ ಬಿತ್ತನೆಯಾಗಿದೆ; ಇದರಲ್ಲಿ ಹಾನಿಗೊಳಗಾಗಿರುವ ಬೆಳೆಯ ಪ್ರಮಾಣ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಸದ್ಯ ಎರಡೂ ಜಿಲ್ಲೆಗಳಲ್ಲಿರುವ ತೊಗರಿ ಬೆಳೆಯ ಪರಿಸ್ಥಿತಿ ಏನು ? (ಸಮಗ್ರ ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಘೋಷಣೆ ಮಾಡಲಾದ ತಾಲ್ಲೂಕುಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೫ (೩೦೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬರುಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಘೋಷಣೆ ಮಾಡಲಾಗಿರುವ ಹೊಸ ತಾಲ್ಲೂಕುಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಹೊಸ ತಾಲ್ಲೂಕು ಕೇಂದ್ರಗಳಲ್ಲಿ ಸಂಬಂಧಪಟ್ಟ ಕಛೇರಿಗಳನ್ನು ಪ್ರಾರಂಭಿಸಲಾಗಿದೆಯೇ; ಪ್ರಾರಂಭಿಸಿದ್ದರೆ, ಯಾವ ಯಾವ ಕಛೇರಿಗಳು ಆರಂಭಗೊಂಡಿವೆ; (ವಿವರ ನೀಡುವುದು)

(ಇ) ಹೊಸ ತಾಲ್ಲೂಕು ಕೇಂದ್ರಗಳಿಗೆ ಅಗತ್ಯವಾದ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಮಗ್ರ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಭೀಮಾ ನದಿಯ ಪ್ರವಾಹದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೬ (೩೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬರುಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಭೀಮಾ ನದಿ ಪ್ರವಾಹದಿಂದ ಭೀಮಾ ನದಿ ತೀರದಲ್ಲಿರುವ ಗ್ರಾಮಗಳು ತೊಂದರೆಗೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಳೇನು; (ಸಮಗ್ರ ಮಾಹಿತಿ ನೀಡುವುದು)

(ಆ) ಪ್ರವಾಹದಿಂದ ಎರಡೂ ಜಿಲ್ಲೆಗಳ ಎಷ್ಟು ಗ್ರಾಮಗಳಿಗೆ ಹಾನಿಯಾಗಿದೆ; (ತಾಲ್ಲೂಕುವಾರು ಸಮಗ್ರ ಮಾಹಿತಿ ನೀಡುವುದು)

(ಇ) ಮೇಲಿಂದ ಮೇಲೆ ಬರುತ್ತಿರುವ ಪ್ರವಾಹದಿಂದ ತತ್ತರಿಸಿ ಹೋಗಿರುವ ಗ್ರಾಮಗಳ ಸ್ಥಳಾಂತರಕ್ಕೆ ರಾಜ್ಯ ಸರ್ಕಾರ ಮುಂದಾಗಿದೆಯೇ; (ವಿವರ ನೀಡುವುದು)

(ಈ) ಪ್ರವಾಹದಿಂದ ಹಾನಿಗೊಳಗಾಗುತ್ತಿರುವ ಗ್ರಾಮಗಳಿಗೆ ಶಾಶ್ವತ ಪರಿಹಾರ ನೀಡುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಮಗ್ರ ಮಾಹಿತಿ ನೀಡುವುದು)

## PWD ಇಲಾಖೆಯ ಬಿಲ್ಲುಗಳ ಕುರಿತು.

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೭ (೨೦೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ೬ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಕೈಗೊಂಡ ಕಾಮಗಾರಿಗಳಾವುವು ; (ಕಾಮಗಾರಿಗೆ ನಿಗದಿ ಪಡಿಸಿದ ಮೊತ್ತ, ವೆಚ್ಚವಾದ ಮೊತ್ತ, ಕಾಮಗಾರಿ ಕೊನೆಗೊಂಡ ದಿನಾಂಕ, ಕಾಮಗಾರಿ ಕುರಿತು ಗುತ್ತಿಗೆದಾರರಿಗೆ ಪಾವತಿಸಲಾದ ಮೊತ್ತ, ಸದರಿ ಕಾಮಗಾರಿ ಕುರಿತು ಅಂತಿಮ ಬಿಲ್ಲು ಪಾವತಿಸಿದ ದಿನಾಂಕದೊಂದಿಗೆ ಸಮಗ್ರ ಮಾಹಿತಿಯನ್ನು ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಕೈಗೊಂಡ ಕಾಮಗಾರಿಗಳನ್ನು ಯಾವ ರೀತಿಯ ಗುತ್ತಿಗೆದಾರರಿಗೆ ನೀಡಲಾಗುತ್ತಿತ್ತು; ಕ್ಲಾಸ್ ೧, ೨ ಮತ್ತು ೩ ದರ್ಜೆಯ ಗುತ್ತಿಗೆದಾರರು ಯಾವ ಕಾಮಗಾರಿಗಳನ್ನು ಪೂರ್ಣಗೊಳಿಸಿರುತ್ತಾರೆ; ಅದರ ಮೊತ್ತವೆಷ್ಟು; (ಗುತ್ತಿಗೆದಾರರ ಹೆಸರು, ಸಂಸ್ಥೆಯ ಹೆಸರು, ವಿಳಾಸ ಮತ್ತು ಸಂಪರ್ಕ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಇ) ಸದರಿ ಜಿಲ್ಲೆಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯಲ್ಲಿ ಗುತ್ತಿಗೆದಾರರಿಗೆ ಪಾವತಿಸಲು ಬಾಕಿ ಇರುವ ಬಿಲ್ಲುಗಳ ಒಟ್ಟು ಮೊತ್ತವೆಷ್ಟು? (ಬಿಲ್ಲು ಸಂಖ್ಯೆಯೊಂದಿಗೆ ವರ್ಷವಾರು ಮಾಹಿತಿ ನೀಡುವುದು)

## ದೇವಸ್ಥಾನಗಳಿಗೆ ಸೇರಿದ ಜಮೀನಿನ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೮ (೨೦೩) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭೂ ಸುಧಾರಣಾ ಕಾಯ್ದೆಯ ಅನ್ವಯ ಉಳುವವನೇ ಹೊಲದೊಡೆಯ ಎಂಬ ಕಾರಣಕ್ಕಾಗಿ ರಾಜ್ಯದ ಮುಜರಾಯಿ ಇಲಾಖೆಯ ದೇವಸ್ಥಾನಗಳಿಗೆ ಸೇರಿದ ಎಷ್ಟು ಎಕರೆ ಭೂಮಿಯನ್ನು ಇದುವರೆಗೆ ಪರಭಾರೆ ಮಾಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಉಳುವವನೇ ಹೊಲದೊಡೆಯ ಎಂಬ ಕಾರಣಕ್ಕಾಗಿ ಕೃಷಿ ಚಟುವಟಿಕೆಗಳನ್ನು ಉತ್ತೇಜಿಸುವ ಸಲುವಾಗಿ ದೇವಸ್ಥಾನಗಳ ಉಂಬಳಿ ಭೂಮಿಯನ್ನು ಪರಭಾರೆ ಮಾಡಿರುವ ಎಷ್ಟು ಎಕರೆ ಭೂ ಪ್ರದೇಶದಲ್ಲಿ ಇಂದಿಗೂ ಕೃಷಿ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ;

(ಇ) ದೇವಸ್ಥಾನಗಳ ಉಂಬಳ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ ಸದರಿ ಭೂಮಿಯನ್ನು ಕೃಷಿಯೇತರ ಉದ್ದೇಶಗಳಿಗಾಗಿ ಎಷ್ಟು

ಎಕರೆ ಭೂಮಿಯನ್ನು ಪರಿವರ್ತಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡ ಕೃಷಿ ಚಟುವಟಿಕೆ ನಡೆಸದೆ ಮಾರಾಟ ಮಾಡಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಉದಾಹರಣೆಗಳು ಎಷ್ಟಿವೆ; (ಜಿಲ್ಲಾವಾರು ವಿವರ ನೀಡುವುದು)

(ಉ) ದೇವಸ್ಥಾನಗಳ ಉಂಬಳಿ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ ಇರುವ ಭೂಮಿಯನ್ನು ಹಿಂಪಡೆಯಲು ಸರಕಾರ ಕೈಗೊಂಡ ಕ್ರಮಗಳೇನು ?

## ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೫೯ (೨೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳಿಸುವಂತೆ ಕೋರಿ ಕಳೆದ ೧೦ ವರ್ಷಗಳಲ್ಲಿ ಎಷ್ಟು ಸರಕಾರಿ ನೌಕರರು ಮನವಿ ಸಲ್ಲಿಸಿದಾರೆ; ಅದರಲ್ಲಿ ವಿಲೀನಗೊಂಡ ಸರಕಾರಿ ನೌಕರರ ಸಂಖ್ಯೆ ಎಷ್ಟು; ಅವರು ಯಾವ ಇಲಾಖೆಯಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡಿರುತ್ತಾರೆ;

(ಆ) ವಿಲೀನಗೊಂಡ ಸದರಿ ಸರಕಾರಿ ನೌಕರರು ಪ್ರಸ್ತುತ ಯಾವ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಸದರಿ ನೌಕರರು ವಿಲೀನಗೊಳ್ಳುವ ಸಂದರ್ಭದಲ್ಲಿ ಯಾವ ಹುದ್ದೆಗೆ ವಿಲೀನಗೊಂಡಿದ್ದರು;

(ಇ) ಈ ನೌಕರರು ವಿಲೀನಗೊಳಿಸುವಂತೆ ಮನವಿ ಸಲ್ಲಿಸಿದ ಎಷ್ಟು ದಿನಗಳಲ್ಲಿ ಈ ವಿಲೀನ ಪ್ರಕ್ರಿಯೆ ಪೂರ್ಣಗೊಂಡಿದೆ ? (ಪ್ರಕರಣವಾರು ಹೆಸರಿನೊಂದಿಗೆ ವಿವರ ನೀಡುವುದು)

## ದೇವಸ್ಥಾನಗಳು ಹೊಂದಿರುವ ಭೂಮಿಯ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೦ (೨೦೪) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಜರಾಯಿ ಇಲಾಖೆ ದೇವಸ್ಥಾನಗಳು ಪ್ರಸ್ತುತ ಎಷ್ಟು ಎಕರೆ ಭೂಮಿಯನ್ನು ಹೊಂದಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಭೂ ಸುಧಾರಣಾ ಕಾಯ್ದೆಯ ಅನ್ವಯ ಉಳುವವನೇ ಹೊಲದೊಡೆಯ ಎಂಬ ಕಾನೂನು ಬರುವ ಮೊದಲು ಮುಜರಾಯಿ ದೇವಸ್ಥಾನಗಳು ಹೊಂದಿದ್ದ ಭೂಮಿ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟ ದೇವಸ್ಥಾನದ ಭೂಮಿಯಲ್ಲಿ ಯಾವ ಯಾವ ರೀತಿಯ ಶಾಶ್ವತ ನಿರ್ಮಾಣಗಳನ್ನು ಮಾಡಲಾಗಿದೆ ; (ಜಿಲ್ಲಾವಾರು ದೇವಸ್ಥಾನವಾರು ಮಾಹಿತಿ ನೀಡುವುದು)

(ಈ) ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಶಿಕ್ಷಣ ಸಂಸ್ಥೆಗಳನ್ನು ನಡೆಸಲಾಗುತ್ತಿದೆಯೇ ? (ಶಿಕ್ಷಣ ಸಂಸ್ಥೆಯ ಹೆಸರಿನೊಂದಿಗೆ ಜಿಲ್ಲಾವಾರು ವಿವರ ನೀಡುವುದು)

## ಬಹು ಮಹಡಿ ಕಟ್ಟಡಗಳಿಗೆ ವಸತಿ ಯೋಗ್ಯ ಪ್ರಮಾಣ ಪತ್ರ ಕುರಿತು.

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೬೧ (೨೦೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಹು ಮಹಡಿ ಕಟ್ಟಡಗಳಿಗೆ ವಸತಿ ಯೋಗ್ಯ ಪ್ರಮಾಣ ಪತ್ರ ನೀಡುವ ಸಮಯದಲ್ಲಿ ಸದರಿ ಕಟ್ಟಡಗಳಲ್ಲಿರುವ ಸೌಲಭ್ಯಗಳಾದ, ಜಿಮ್ನಾಶಿಯಂ ಕೊಠಡಿ, ಫಂಕ್ಷನ್ ಹಾಲ್, ಕ್ಲಬ್ ಹೌಸ್, ಇನ್ಡೋರ್ ಗೇಮ್ಸ್, ಸ್ವಿಮಿಂಗ್ ಪೂಲ್ ಸೌಲಭ್ಯಗಳಿಗೂ ಬಳಕೆ ಪ್ರಮಾಣಪತ್ರ ನೀಡಲಾಗುತ್ತಿದೆಯೇ;

(ಆ) ಸದರಿ ಸೌಲಭ್ಯಗಳ ಕೊಠಡಿಗಳಿಗೆ ಆಸ್ತಿ ತೆರಿಗೆ ವಿಧಿಸಲಾಗುತ್ತಿದೆಯೇ; ಕಳೆದ ೫ ವರ್ಷಗಳಲ್ಲಿ ಈ ಸೌಲಭ್ಯಗಳನ್ನು ನೀಡುವ ವಸತಿ ಸಂಕೀರ್ಣಗಳಲ್ಲಿ ಸಂಗ್ರಹಿಸಲಾದ ಆಸ್ತಿ ತೆರಿಗೆ ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ಮೇಲ್ಕಂಡ ಸೌಲಭ್ಯಗಳ ಕುರಿತು ವಾಸ ಯೋಗ್ಯ ಪ್ರಮಾಣ ಪತ್ರದಲ್ಲಿ (oc) ನಮೂದಿಸಲಾಗುತ್ತಿದೆಯೇ; ಈ ಸೌಲಭ್ಯಗಳು ಇರುವ ಶಾಶ್ವತ ನಿರ್ಮಾಣಗಳಿಗೆ ಡೋರ್ ನಂಬರ್ ನೀಡಲಾಗಿದೆಯೇ; ಡೋರ್ ನಂಬರ್ ಇಲ್ಲದೆ ಈ ಸೌಲಭ್ಯಗಳನ್ನು ನೀಡಬಹುದೇ ? (ವಿವರ ನೀಡುವುದು)

## ಮೈಸೂರು ಚಾಮರಾಜನಗರ ಜಿಲ್ಲೆಯಲ್ಲಿ ಭತ್ತ ಖರೀದಿ ಕೇಂದ್ರಗಳ ಸ್ಥಾಪನೆ

**ಶ್ರೀ ಎಸ್ ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೨ (೩೧೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಲ್ಲೆಲ್ಲಿ ಭತ್ತ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ; (ವಿವರ ಒದಗಿಸುವುದು) ಎಲ್ಲೆಲ್ಲಿ ಭತ್ತ ಖರೀದಿ ಕೇಂದ್ರಗಳನ್ನು ಸ್ಥಾಪಿಸಬೇಕೆಂದು ರೈತರಿಂದ ಬೇಡಿಕೆ ಬಂದಿದೆ; ಬೇಡಿಕೆ ಬಂದ ಕಡೆ ಭತ್ತ ಖರೀದಿ ಕೇಂದ್ರ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಭತ್ತ ಖರೀದಿಗೆ ನಿಗದಿಗೊಳಿಸಿರುವ ಬೆಂಬಲ ಬೆಲೆ ಮತ್ತು ಖರೀದಿಗೆ ವಿಧಿಸಿರುವ ಮಿತಿ ಎಷ್ಟು; ಇದುವರೆಗೆ ಎಷ್ಟು ಭತ್ತವನ್ನು ಖರೀದಿಸಲಾಗಿದೆ; ಎಲ್ಲಿಯವರೆಗೆ ಈ ಭತ್ತ ಖರೀದಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ;

(ಇ) ಭತ್ತ ಖರೀದಿ ಕೇಂದ್ರಗಳ ಮೂಲಕ ಭತ್ತ ಖರೀದಿಗೆ ವಿಧಿಸಿರುವ ಪ್ರಕ್ರಿಯೆಗಳನ್ನು ಸರಳೀಕರಣ ಗೊಳಿಸಲಾಗುವುದೇ ?

## ಚಾಮರಾಜನಗರದಲ್ಲಿ ವಸತಿ ಇಲಾಖೆಯಿಂದ ಟೌನ್‌ಶಿಪ್ ನಿರ್ಮಾಣ

**ಶ್ರೀ ಎಸ್ ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೩ (೩೧೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದಲ್ಲಿ ವಸತಿ ಇಲಾಖೆ ಅಥವಾ ಹೌಸಿಂಗ್ ಬೋರ್ಡ್ ವತಿಯಿಂದ ನಿವೇಶನಗಳನ್ನು ರಚನೆ ಮಾಡಿ, ಟೌನ್‌ಶಿಪ್ ನಿರ್ಮಿಸಲು ಯೋಜನೆಯನ್ನು ರೂಪಿಸಲಾಗಿದೆಯೇ ; ಯೋಜನೆಯ ರೂಪುರೇಷೆಗಳೇನು ; (ವಿವರ ಒದಗಿಸುವುದು)

(ಆ) ಚಾಮರಾಜನಗರ, ಮೈಸೂರು ಜಿಲ್ಲೆಗಳಲ್ಲಿ ತಾಲ್ಲೂಕು ಕೇಂದ್ರಗಳ ಅವ್ಯವಸ್ಥಿತ ಬೆಳವಣಿಗೆಯನ್ನು ತಡೆಯಲು, ನಿವೇಶನಗಳ ಬೇಡಿಕೆ ಬಗ್ಗೆ ಸರ್ವೆ ನಡೆಸಿ; ವಸತಿ ಯೋಜನೆಗಳನ್ನು ರೂಪಿಸಲು ಕ್ರಮ ಜರುಗಿಸಲಾಗುವುದೇ ;

(ಇ) ಮೈಸೂರು ನಗರ ಸಮೀಪದ ಇಮ್ಮಾವು ಬಳಿ ವಸತಿ ಇಲಾಖೆ/ ಹೌಸಿಂಗ್ ಬೋರ್ಡ್ ವತಿಯಿಂದ ಕೈಗೊಳ್ಳಲು ಉದ್ದೇಶಿಸಲಾಗಿದ್ದ ಟೌನ್‌ಶಿಪ್/ವಸತಿ ಯೋಜನೆ ಯಾವ ಹಂತದಲ್ಲಿದೆ ?

## ಚಾಮರಾಜನಗರ ಜಿಲ್ಲೆಗಳಲ್ಲಿ ಕೆರೆಗಳ ಒತ್ತುವರಿ ಸರ್ವೆ ಕಾರ್ಯ

**ಶ್ರೀ ಎಸ್ ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೪ (೩೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆಯಲ್ಲಿ ಕೆರೆಗಳ ಒತ್ತುವರಿಯನ್ನು ಗುರುತಿಸಲು ಸರ್ವೆ ಕಾರ್ಯ ಕೈಗೊಳ್ಳಲಾಗಿದೆಯೇ ; ಇದುವರೆಗೆ ಎಷ್ಟು ಕೆರೆಗಳ ಸರ್ವೆ ಕಾರ್ಯ ನಡೆಸಿ ಒತ್ತುವರಿಯನ್ನು ಗುರುತಿಸಲಾಗಿದೆ; ಮೈಸೂರು ಜಿಲ್ಲೆಗೂ ಕೂಡಾ ಈ ಕೆರೆಗಳ ಒತ್ತುವರಿ ಗುರುತಿಸುವ ಸರ್ವೆ ಕಾರ್ಯವನ್ನು ವಿಸ್ತರಿಸಲಾಗುವುದೇ;

(ಆ) ಕೆರೆಗಳ ಒತ್ತುವರಿಯನ್ನು ಗುರುತಿಸಿ, ಬಾಂದು ಕಲ್ಲುಗಳನ್ನು ನೆಟ್ಟು, ಒತ್ತುವರಿಯನ್ನು ತೆರವುಗೊಳಿಸುವ ಕಾರ್ಯವನ್ನು ತ್ವರಿತಗೊಳಿಸಲಾಗುವುದೇ ?

## ಅನುದಾನ ಹಂಚಿಕೆ ಮಾಡಿರುವ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೬೫ (೨೨೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಿಂದ ಕಳೆದ ೩ ವರ್ಷಗಳಲ್ಲಿ ಶಾಸಕರುಗಳ ಕ್ಷೇತಗಳಿಗೆ ಬಿಡುಗಡೆ ಮಾಡಲಾದ ಅನುದಾನ ಎಷ್ಟು; (ವಿಧಾನಸಭಾ ಕ್ಷೇತ್ರವಾರು ಮತ್ತು ಯೋಜನಾವಾರು ಮಾಹಿತಿಯನ್ನು ನೀಡುವುದು)

(ಆ) ಅನುದಾನ ಬಿಡುಗಡೆ ಮಾಡಲು ಅನುಸರಿಸದ ಮಾನದಂಡಗಳು ಯಾವುವು ? (ಈ ಬಗೆಗಿನ ಮಾಹಿತಿಯನ್ನೊಳಗೊಂಡ ಪ್ರತಿ ಒದಗಿಸುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 088/400 ಪ್ರತಿಗಳು/05–12–2020